EMAIL : dairyadadaari@gmail.com ಸಂಪುಟ: 01 ಸಂಚಿಕೆ: 209
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಬುಧವಾರ: 29–07–2026

## ನೇಮಕಾತಿ ಅಕ್ರಮಕ್ಕೆ ಸರ್ಕಾರದ ಕಠಿಣ ನಿಲುವು

# ಕೆಪಿಎಸ್‌ಸಿ ಅಕ್ರಮ ಸಿಐಡಿಗೆ

### ಎರಡು ಪ್ರಕರಣಗಳ ತನಿಖೆಯು ಸಿಐಡಿಗೆ | ಸ್ವತಂತ್ರ, ಪಾರದರ್ಶಕ ತನಿಖೆಗೆ ಬದ್ಧ: ಪ್ರಿಯಾಂಕ ಖರ್ಗೆ




**ಬೆಂಗಳೂರು, ಜು. 28–** ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ದಲ್ಲಿ ನಡೆದಿರುವ ನೇಮಕಾತಿ ಅಕ್ರಮದ ತನಿಖೆ ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದೆ.

ಕೆಪಿಎಸ್‌ಸಿ ನೇಮಕಾತಿ ಅಕ್ರಮಕ್ಕೆ ಸಂಬಂಧಿಸಿದಂತೆ ದಾಖಲಾಗಿರುವ ಎರಡು ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ ಎಂದು ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನ್ಯಾಯ ಸಮ್ಮತ ಮತ್ತು ನಿಷ್ಪಕ್ಷಪಾತ ಜತೆಗೆ ಅಕ್ರಮದ ಸಮಗ್ರ ತನಿಖೆ ನಡೆಸುವ ಉದ್ದೇಶದಿಂದ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಕೆಪಿಎಸ್‌ಸಿ ನೇಮಕಾತಿ ಅಕ್ರಮದ ಬಗ್ಗೆ ದಾಖಲಾಗಿದ್ದ ಎರಡು ಪ್ರಕರಣಗಳನ್ನು ಮುಂದಿನ ತನಿಖೆಗೆ ಸಿಐಡಿಗೆ ವಹಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಕೆಪಿಎಸ್‌ಸಿ ನೇಮಕಾತಿ ಅಕ್ರಮದ ಪ್ರಕರಣಗಳನ್ನು ಸಿಐಡಿಗೆ ವರ್ಗಾಯಿಸುವ ಮೂಲಕ ಸ್ವತಂತ್ರ ಹಾಗೂ ಪಾರದರ್ಶಕ ತನಿಖೆ ನಡೆಸುವ ಸರ್ಕಾರದ ಬದ್ಧತೆಯನ್ನು ತೋರಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕ ನೇಮಕಾತಿ ಪ್ರಕ್ರಿಯೆಗಳ ಪಾವಿತ್ರ್ಯ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡಲು ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ. ಪರೀಕ್ಷೆಗಳು ಅಥವಾ ನೇಮಕಾತಿ ಪ್ರಕ್ರಿಯೆಗಳಲ್ಲಿನ ಭ್ರಷ್ಟಾಚಾರ, ಅಕ್ರಮಗಳ ಬಗ್ಗೆ ಯಾವುದೇ ಒತ್ತಡವಿಲ್ಲದೆ ನಿಷ್ಪಕ್ಷಪಾತವಾದ ತನಿಖೆ ನಡೆಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಸಿಐಡಿ ತನಿಖೆಯಲ್ಲಿ ಕೆಪಿಎಸ್ಸಿ ಅಕ್ರಮ ನೇಮಕಾತಿಗೆ ಸಂಬಂಧಿಸಿದಂತೆ ತಪ್ಪಿತಸ್ಥರು ಯಾವುದೇ ಹುದ್ದೆಯಲ್ಲಿ ಇರಲಿ, ಅವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸ್ಪರ್ಧಾತ್ಮಕ ಪರೀಕ್ಷೆಗಳ ಪಾವಿತ್ರ್ಯತೆಯನ್ನು ಕಾಪಾಡುವುದು ಮತ್ತು ಪ್ರತಿಭಾವಂತರಿಗೆ ನ್ಯಾಯ ದೊರಕುವಂತೆ ಮಾಡುವುದು ರಾಜ್ಯ ಸರ್ಕಾರದ ಆದ್ಯತೆಯಾಗಿದೆ. ಈ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ ಎಂದು ಗೃಹ ಸಚಿವರು ತಿಳಿಸಿದ್ದಾರೆ.

**ಕೆಪಿಎಸ್‌ಸಿ ವಿರುದ್ಧ ದೂರು: ಸಿಐಡಿಯಿಂದ ತನಿಖೆ**

ಕರ್ನಾಟಕ ಲೋಕ ಸೇವಾ ಆಯೋಗ (ಕೆಪಿಎಸ್ಸಿ) ದಲ್ಲಿ ಸರ್ಕಾರಿ ಹುದ್ದೆಗಾಗಿ ನಡೆದಿದೆ ಎನ್ನಲಾದ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರು ಎಫ್‌ಐಆರ್‌ಗಳು ದಾಖಲಾಗಿವೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ತಿಳಿಸಿದ್ದಾರೆ.

ಕಮೀಷನರ್ ಕಚೇರಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಪಿಎಸ್‌ಸಿ ಯಲ್ಲಿ ಹುದ್ದೆಗಾಗಿ ನಡೆದಿದೆ ಎನ್ನಲಾದ ಡೀಲಿಂಗ್ ಪ್ರಕರಣ ಸಂಬಂಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಮೂರು ಎಫ್‌ಐಆರ್ ಗಳು ದಾಖಲಾಗಿವೆ ಎಂದು ಹೇಳಿದರು.ಕೆಪಿಎಸ್‌ಸಿ ಯಲ್ಲಿ ಹುದ್ದೆಗಾಗಿ ನಡೆದಿರುವ ಡೀಲಿಂಗ್ ಸಂಬಂಧ ದಾಖಲಾದ ಮೂರು ಎಫ್‌ಐಆರ್ ಗಳ ಪೈಕಿ ಎರಡನ್ನು ಸಿಐಡಿಗೆ ವರ್ಗಾವಣೆ ಮಾಡಿ ಉಳಿದ ಒಂದು ಎಫ್‌ಐಆರ್ ತನಿಖೆಗೆ ಕೋರ್ಟ್‌ನಲ್ಲಿ ಅನುಮತಿ ಕೇಳಲಾಗಿದೆ ಎಂದು ಹೇಳಿದರು. ಕೆಪಿಎಸ್‌ಸಿ ಯಲ್ಲಿ ಹುದ್ದೆಗಾಗಿ ನಡೆದಿರುವ ಡೀಲಿಂಗ್ ಸಂಬಂಧ ದಾಖಲಾಗಿರುವ ಮೂರು ಎಫ್‌ಐಆರ್ ಗಳ ಪೈಕಿ ಎರಡು ಕೇಸ್‌ಗಳನ್ನ ಸಿಐಡಿಗೆ ವರ್ಗಾವಣೆ ಮಾಡಿ ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ ಆದೇಶ ಮಾಡಿದ್ದಾರೆ ಎಂದು ಹೇಳಿದರು

ಕೆಪಿಎಸ್‌ಸಿಯಲ್ಲಿ 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ 80 ಲಕ್ಷ ರೂ. ವರೆಗೆ ಲಂಚ ಪಡೆದಿರುವ ಗಂಭೀರ ಆರೋಪ ಕೇಳಿಬಂದಿದೆ.ಪಶುವೈದ್ಯರ ನೇಮಕಾತಿಯಲ್ಲಿ ಶೇ 60ರಷ್ಟು ಹುದ್ದೆಗಳನ್ನು ಅಕ್ರಮವಾಗಿ ಮಾರಾಟ ಮಾಡಲಾಗಿದೆ, ಪ್ರತಿ ಹುದ್ದೆಗೆ 80 ಲಕ್ಷ ರೂ ಲಂಚ ನಿಗದಿಯಾಗಿತ್ತು ಎನ್ನುವ ಆರೋಪದ ಆಡಿಯೋ ವೈರಲ್ ಆಗಿದೆ. ಆರೋಪವನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹಾಗೂ ಕೆಪಿಎಸ್‌ಸಿ ವಿರುದ್ಧ ವಿದ್ಯಾರ್ಥಿಗಳು ಹಾಗೂ ಪಶುವೈದ್ಯಾಧಿಕಾರಿಗಳು ಹೋರಾಟ ನಡೆಸುತ್ತಿದ್ದಾರೆ.

---

### ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ

## ಪತ್ರಕರ್ತರು ಸಮಾಜದ ಬಗ್ಗೆ ಪ್ರಾಮಾಣಿಕ ಕಳಕಳಿ ಹೊಂದಿರಬೇಕು: ಎನ್.ಎಸ್.ಬಿ



ಧೈರ್ಯದ ದಾರಿ

**ರಾಯಚೂರು ಜುಲೈ 28:** ಪರ್ತಕರ್ತರು ಸಮಾಜದ ಬಗ್ಗೆ ಪ್ರಾಮಾಣಿಕ ಕಳಕಳಿ ಹೊಂದಿದಲ್ಲಿ ಮಾತ್ರ. ಪತ್ರಕರ್ತರ ವೃತ್ತಿಗೆ ಗೌರವ ದೊರೆಯಲಿದೆ ಎಂದು ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು ಅವರು ಹೇಳಿದರು.

ಜುಲೈ 28ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ ರಾಯಚೂರು, ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಮತ್ತು ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮಾಜದಲ್ಲಿನ ನ್ಯೂನತೆಯನ್ನು ತಿದ್ದಲು ಸುದ್ದಿ ಮಾಧ್ಯಮ ಪ್ರಬಲ ಅಸ್ತ್ರವಾಗಿದ್ದು, ಸಮಾಜದ ಬಗ್ಗೆ ಕಳಕಳಿ ಇಲ್ಲದ ಪರ್ತಕರ್ತರ ವೃತ್ತಿಗೆ ಜನಮನ್ನಣೆ ದೊರೆಯಲು ಸಾಧ್ಯವಿಲ್ಲ. ಸ್ವಾತಂತ್ರ ಹೋರಾಟದಲ್ಲಿ ಮಹಾತ್ಮ ಗಾಂಧೀಜಿ, ಅಂಬೇಡ್ಕರ್, ಡಿ.ವಿ ಗುಂಡಪ್ಪ ಮತ್ತಿತರ ಹೋರಾಟಗಾರರು ಪತ್ರಿಕೆಯನ್ನು ಸಮಾಜಕ್ಕೆ ಪೂರಕವಾಗಿ ಬಳಸಿಕೊಂಡು ಪತ್ರಿಕಾ ಕ್ಷೇತ್ರದ ಮೌಲ್ಯ ಹೆಚ್ಚಿಸಿದ್ದಾರೆ ಎಂದರು.

ಸಮಾಜದಲ್ಲಿ ಪತ್ರಿಕೋದ್ಯಮ ಕ್ಷೇತ್ರಾ ಅತ್ಯಂತ ಉತ್ತಮ ಸ್ಥಾನಮಾನ ಹೊಂದಿದೆ. ರಾಯಚೂರಿನಲ್ಲಿ ಮೊದಲು ರಾಯಚೂರು ವಾಣಿ ಪತ್ರಿಕೆಯನ್ನು ಎನ್.ಕೆ.ಕುಲಕರ್ಣಿ ಅವರು ಸ್ಥಾಪಿಸಿ, ಇಲ್ಲಿನ ಕುಂದುಕೊರತೆಗಳ ಕುರಿತು ಬೆಳಕು ಚೆಲ್ಲಿದ್ದಾರೆ. ಪ್ರಸ್ತುತ ದಿನದಲ್ಲಿ ಪತ್ರಿಕೋದ್ಯಮ ಕ್ಷೇತ್ರವು ವಿಸ್ತರಣೆಯಾಗಿದೆ. ಪತ್ರಕರ್ತರು ಯಾರನ್ನು ವೈಯುಕ್ತಿಕ ತೇಜೋವದೆ ಮಾಡಬಾರದು. 2ನೇ ಪುಟಕ್ಕೆ


---

### ಗುರು ಪೌರ್ಣಮಿ ಅಂಗವಾಗಿ ಇಂದು

## ಶ್ರೀ ಚೌಡೇಶ್ವರಿ ದೇವಿಯ ಪಲ್ಲಕ್ಕಿ ಉತ್ಸವ

### ಮಾನ್ವಿಯಿಂದ ಸೀಕಲ್ ಗ್ರಾಮಕ್ಕೆ ಭಕ್ತಿಭಾವದ ಮೆರವಣಿಗೆ

ಧೈರ್ಯದ ದಾರಿ



**ಮಾನ್ವಿ, ಜು. 28:** ಗುರು ಪೌರ್ಣಮಿ ಅಂಗವಾಗಿ ಜುಲೈ 29ರಂದು ಮಾನ್ವಿ ನಗರದ ಶ್ರೀ ತೊಗಟವೀರ ಕ್ಷತ್ರಿಯ ಸಮಾಜದ ವತಿಯಿಂದ ಸೀಕಲ್ ಗ್ರಾಮದಲ್ಲಿರುವ ಉದ್ಭವ ಮೂರ್ತಿ ಶ್ರೀಶ್ರೀಶ್ರೀ ಚೌಡೇಶ್ವರಿ ದೇವಿಯ ಪರವಾಗಿ ಸಾಂಪ್ರದಾಯಿಕ ಪಲ್ಲಕ್ಕಿ ಉತ್ಸವ ಹಾಗೂ ವಿಶೇಷ ಪೂಜಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ನಗರದ ಶ್ರೀ ಚೌಡೇಶ್ವರಿ ದೇವಸ್ಥಾನದಿಂದ ಬೆಳಿಗ್ಗೆ 6.00 ಗಂಟೆಗೆ ಡೊಳ್ಳು ವಾದ್ಯ, ಕಳಶ ಹಾಗೂ ಭಜನಾ ತಂಡಗಳೊಂದಿಗೆ ಪಲ್ಲಕ್ಕಿ ಉತ್ಸವ ಆರಂಭವಾಗಲಿದೆ. ಅಲ್ಲಿಂದ ಜಡೆ ಬಸವೇಶ್ವರ ದೇವಸ್ಥಾನ, ಬಳಿಕ ಐಬಿ (IB) ಸಮೀಪದ ಶ್ರೀ ಲಕ್ಷ್ಮೀ ದೇವಸ್ಥಾನಕ್ಕೆ ತೆರಳಿ, ನಂತರ ಸೀಕಲ್ ಗ್ರಾಮಕ್ಕೆ ಭವ್ಯ ಮೆರವಣಿಗೆಯ ಮೂಲಕ ಪಲ್ಲಕ್ಕಿ ಸಾಗಲಿದೆ. ಸೀಕಲ್ ಗ್ರಾಮದಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಚೌಡೇಶ್ವರಿ ದೇವಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.



**ಈ ಆಚರಣೆಯು ಸಮಾಜದ ಪೂರ್ವಜರ ಕಾಲದಿಂದಲೂ ನಡೆದು ಬಂದಿರುವ ಸಂಪ್ರದಾಯವಾಗಿದ್ದು, ಅದನ್ನು ಮುಂದುವರಿಸಿಕೊಂಡು ಬರುತ್ತಿದ್ದೇವೆ. ಈ ಸಂದರ್ಭದಲ್ಲಿ ಭಕ್ತರು ದೇವಿಗೆ ಕಾಯಿ, ಕರ್ಪೂರ ಹಾಗೂ ನೈವೇದ್ಯ ಸಮರ್ಪಿಸಿ ದೇವಿಯ ಆಶೀರ್ವಾದ ಪಡೆಯಲಿದ್ದಾರೆ ಎಂದು ತೊಗಟವೀರ ಕ್ಷತ್ರಿಯ ಯುವಕ ಸಂಘದ ಕಾರ್ಯದರ್ಶಿ ಪಿರುಮಾಳ ವೀರೇಶ ತಿಳಿಸಿದ್ದಾರೆ. ಮಾನ್ವಿ ನಗರದ ಹಾಗೂ ಸುತ್ತಮುತ್ತಲಿನ ಎಲ್ಲಾ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಚೌಡೇಶ್ವರಿ ದೇವಿಯ ಕೃಪೆಗೆ ಪಾತ್ರರಾಗುವಂತೆ ಅವರು ಮನವಿ ಮಾಡಿದ್ದಾರೆ.**

---

## ಮಾನ್ವಿ 18ನೇ ವಾರ್ಡ್‌ನಲ್ಲಿ ಕುಡಿಯುವ ನೀರಿಗೆ ಹಾಹಾಕಾರ

### ಕಾಮಗಾರಿ ನೆಪದಲ್ಲಿ ರಸ್ತೆ ಅಗೆದು ನೀರು ಪೂರೈಕೆ ಸ್ಥಗಿತ?: ಸ್ಥಳೀಯರ ಆರೋಪ

ಧೈರ್ಯದ ದಾರಿ

**ಮಾನ್ವಿ, ಜು. 28:** ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದ 18ನೇ ವಾರ್ಡ್‌ನಲ್ಲಿ ಕಳೆದ ಒಂದು ವಾರದಿಂದ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ನಿವಾಸಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ರಸ್ತೆ ಕಾಮಗಾರಿ ವೇಳೆ ತಗ್ಗು–ಗುಂಡಿಗಳನ್ನು ಅಗೆದ ಪರಿಣಾಮ ನೀರು ಪೂರೈಕೆಗೆ ತೊಂದರೆಯಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಈ ಕುರಿತು ಪತ್ರಕರ್ತ ಶಫಿ ಚಾವೂಷ್ ಗಂಭೀರ ಆರೋಪ ಮಾಡಿದ್ದು, ಕಾಮಗಾರಿ ನಡೆಸಿದ ನಂತರ ಸಮರ್ಪಕವಾಗಿ ನೀರು ಪೂರೈಕೆ ವ್ಯವಸ್ಥೆ ಪುನಃಸ್ಥಾಪಿಸದ ಕಾರಣ ವಾರ್ಡ್ ನಿವಾಸಿಗಳು ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ ಎಂದು ತಿಳಿಸಿದ್ದಾರೆ.

ಸ್ಥಳೀಯರ ಪ್ರಕಾರ, ಒಂದು ವಾರದಿಂದ ನಿಯಮಿತವಾಗಿ ಕುಡಿಯುವ ನೀರು ಸರಬರಾಜಾಗುತ್ತಿಲ್ಲ. ಮಹಿಳೆಯರು ಹಾಗೂ ಹಿರಿಯ ನಾಗರಿಕರು ನೀರಿಗಾಗಿ ದೂರದ ಪ್ರದೇಶಗಳಿಗೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ, ಸಾಮಾಜಿಕ ಕಾರ್ಯಕರ್ತ ಶೌಕತ್ ಅಲಿ ಅವರು, ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದ್ದರೂ ಜನಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ. ಸ್ಥಳೀಯ ಶಾಸಕರು ಹಾಗೂ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.



#### ಸ್ಥಳೀಯರ ಆಗ್ರಹ

–ತಕ್ಷಣ ಕುಡಿಯುವ ನೀರಿನ ಸರಬರಾಜು ಪುನರಾರಂಭಿಸಬೇಕು.
–ರಸ್ತೆ ಕಾಮಗಾರಿಯಿಂದ ಹಾನಿಗೊಂಡ ಪೈಪ್‌ಲೈನ್‌ಗಳನ್ನು ದುರಸ್ತಿ ಮಾಡಬೇಕು.
–ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಶಾಶ್ವತ ಪರಿಹಾರ ಕಲ್ಪಿಸಬೇಕು.
–ವಾರ್ಡ್ ನಿವಾಸಿಗಳಿಗೆ ಪರ್ಯಾಯ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು.

---

## ಹಡಪದ ಅಪ್ಪಣ್ಣ ಸಮುದಾಯ ಭವನ ನಿರ್ಮಾಣಕ್ಕಾಗಿ ಮನವಿ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾನ್ವಿ ಪಟ್ಟಣದ ಹಡಪದ ಸಮಾಜದ ವತಿಯಿಂದ ಮಾಜಿ ಸಚಿವರು ಹಾಗೂ ವಿಧಾನಪರೀಷತ್ ಸದಸ್ಯರಾದ ಎನ್. ಎಸ್ .ಬೋಸರಾಜು ಹಾಗೂ ಶಾಸಕ ಹಂಪಯ್ಯನಾಯಕ ರವರಿಗೆ ಮನವಿ ಪತ್ರ ಸಲ್ಲಿಸಿ ತಾಲ್ಲೂಕು ಹಡಪದ ಸಮಾಜದ ಅಧ್ಯಕ್ಷರಾದ ವಿರೇಶ ಹಡಪದ ಮಾತನಾಡಿ ತಾಲೂಕಿನ ಹಡಪದ ಸಮಾಜದವರಿಗೆ ಕಾರ್ಯಕ್ರಮಗಳನ್ನು ನಡೆಸುವುದಕ್ಕೆ ಹಾಗೂ ಸಮಾಜದ ವಿವಿಧ ಚಟುವಟಿಕೆಗಳನ್ನು ಅಯೋಜಿಸುವುದಕ್ಕೆ ನಮ್ಮದೆ ಆದ ಸಮುದಾಯ ಭವನದ ಅವಶ್ಯಕತೆ ಇದ್ದು ಶಾಸಕರ ಅನುದಾನದಲ್ಲಿ ಹಡಪದ ಅಪ್ಪಣ್ಣ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವಂತೆ ಕೋರಿದರು. ಸಮಾಜದ ಮುಖಂಡರಾದ ನಾಗರಾಜ ಹಡಪದ ,ವೆಂಕಟೇಶ್ ಹಡಪದ, ಶ್ರೀಮಂತ ಹಡಪದ , ಆನಂದ , ಶರಣಪ್ಪ ಮುಳ್ಳೂರು ,ದೇವರಾಜ್ ಮದ್ಲಪೂರ, ಶಿವುಕುಮಾರ ಮಾನ್ವಿ ,ವಿರುಪಣ್ಣ ಹಿರೇಕೋಟ್ನೆಕಲ್, ಸೂಗರೇಶ ಚೀಕಲಪರ್ವಿ ಸೇರಿದಂತೆ ಇನ್ನಿತರರು ಇದ್ದರು.

---

### ಆಟೋ ಚಾಲಕರಿಗೆ ಸಮವಸ್ತ್ರ ವಿತರಿಸಿ ಉದಯಸಾಹುಕಾರ ಹುಟ್ಟುಹಬ್ಬ ಆಚರಣೆ.

## ಹುಟ್ಟಿದ ಮೇಲೆ ಸಮಾಜಕ್ಕೆ ಕೊಡುಗೆ ನೀಡಬೇಕು: ಉದಯಕುಮಾರ ಸಾಹುಕಾರ

ಧೈರ್ಯದ ದಾರಿ




**ಸಿರವಾರ, ಜು.28:** ತಾಯಿಯ ಹೊಟ್ಟೆಯಿಂದ ಭೂಮಿಗೆ ಆಗಮಿಸಿದ ಪ್ರತಿಯೊಬ್ಬರು ಸಮಾಜಕ್ಕೆ ಒಂದಿಲ್ಲಾ ಒಂದು ಕೊಡುಗೆಯನ್ನು ನೀಡಬೇಕು, ರೈತರು ಕೃಷಿಯ ಜೊತೆಗೆ ಲಾಭದಾಯಕ ಉದ್ಯೋಗ ಮಾಡಬೇಕು, ಈ ಸಮಾಜ ಕ್ಕೆ ನಾವು ಯಾವುದಾದರೂ ಅಭಿವೃದ್ಧಿ, ಹೆಸರು ಉಳಿಸುವ ಕಾರ್ಯಗಳನ್ನು ಮಾಡಬೇಕು ಎಂದು ಉದ್ಯಮಿ, ಪ್ರಗತಿ ಪರ ರೈತ ಎನ್.ಉದಯಕುಮಾರ್ ಸಾಹುಕಾರ್ ಹೇಳಿದರು.

ಪಟ್ಟಣದ ಶ್ರೀ ಬಸವೇಶ್ವರ ವೃತ್ತದ ಹಿಂಬಾಗದಲ್ಲಿರುವ ಅರಕೇರಿ ಶಿವಶರಣರ ಸಾಹುಕಾರ್ ಇವರ ಆವರಣದಲ್ಲಿ ಎನ್.ಉದಯಕುಮಾರ ಅವರ ಹುಟ್ಟು ಹಬ್ಬವನ್ನು ಅವರ ಅಭಿಮಾನಿ ಬಳಗದಿಂದ ಆಟೋ ಹಾಗೂ ವಾಹನ ಚಾಲಕರಿಗೆ ಸಮವಸ್ತ್ರ ವಿತರಣೆ, ಕಾನೂನು ಅರಿವು ನೆರವು, ಆರೋಗ್ಯ ಶಿಬಿರ, ಸಸಿಗಳ ವಿತರಣೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಂತರ ಮಾತನಾಡಿದ ಅವರ

ಇಂದಿನ ದಿನಗಳಲ್ಲಿ ರಾಜಕೀಯ ವಾತಾವರಣ ಕಲುಷಿತಗೊಂಡಿದೆ, ಸಮಾಜದ ಮೇಲೆ ಕೆಟ್ಟ ಪರಿಣಾಮ ಬಿರಿದೆ, ಸ್ವಚ್ಛ ಸಮಾಜ, ಸ್ವಚ್ಚ ರಾಜಕೀಯ ನಿರ್ಮಾಣ ಕಾರ್ಯ ಆಗಲು ಯುವಕರು ತಿಳಿದುಕೊಳ್ಳಬೇಕು, ರೈತರಿಗೆ ತುಂಗಭದ್ರಾ ನದಿಯ ನೀರಿನ, ಅದರ ಸ್ವಚ್ಚತೆ ಬಗ್ಗೆ ಚಿಂತನೆ ಮಾಡಬೇಕು, ಅದನ್ನು ಮುಂದಿನ ಪೀಳಿಗೆಗೆ ಉಳಿಸಿಕೊಂಡು ಹೋಗಬೇಕು ಎಂದು ತಿಳಿಸಿದರು. ನೀಲಗಲ್ ಬೃಹನ್ಮಠದ ಪೂಜ್ಯ ಶ್ರೀ ಡಾ. ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಇಂತಹ ಅರ್ಥಪೂರ್ಣ ಕಾರ್ಯಕ್ರಮಗಳು ಇನ್ನಷ್ಟು ಮೂಡಿಬರಬೇಕು ಮತ್ತು ಜನರಿಗೆ ಇದರ ಸದುಪಯೋಗವಾಗಬೇಕು ಎಂದು ಆಶಿಸಿದರು. "ನಿಮ್ಮ ಜೀವನ ನಿಮ್ಮ ಕೈಯಲ್ಲಿದೆ. ನಮ್ಮ ಆಲೋಚನೆಗಳೇ ನಮ್ಮನ್ನು ಉದ್ಧರಿಸುತ್ತವೆ" ಎಂದು ಹೇಳಿದ ಅವರು, ಉದಯಕುಮಾರ್ ಅವರಿಂದ ಮತ್ತಷ್ಟು ಸಮಾಜಮುಖಿ ಕಾರ್ಯಗಳು ನೆರವೇರಲಿ ಎಂದ ಹಾರೈಸಿದರು. ಕಾರ್ಯಕ್ರಮ ಪೂರ್ವದಲ್ಲಿ ಪ್ರವಾಸಿ ಮಂದಿರದಿಂದ ರಾಯಚೂರು 2ನೇಪುಟಕ್ಕೆ

ಮೊದಲನೇ ಪುಟದಿಂದ

## ಆಟೋ ಚಾಲಕರಿಗೆ ಸಮವಸ್ತ್ರ ವಿತರಿಸಿ ಉದಯಸಾಹುಕಾರ ಹುಟ್ಟುಹಬ್ಬ ಆಚರಣೆ.

### ಹುಟ್ಟಿದ ಮೇಲೆ ಸಮಾಜಕ್ಕೆ ಕೊಡುಗೆ ನೀಡಬೇಕು: ಉದಯಕುಮಾರ ಸಾಹುಕಾರ

ಲಿಂಗಸ್ಗೂರು ಮುಖ್ಯರಸ್ತೆ ಮಾರ್ಗವಾಗಿ ಬಸವೇಶ್ವರ ವೃತ್ತದ ವರೆಗೂ ಬೈಕ್ –ಅಟೋ ರ್ಯಾಲಿ ಮೂಲಕ ಕರೆತರಲಾಯಿತು. ಈ ಸಂದರ್ಭದಲ್ಲಿ ನವಲಕಲ್ ಬೃಹನ್ಮಠದ ಪೂಜ್ಯ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಬ್ರಹ್ಮಕುಮಾರಿ ಜ್ಯೋತಿ ಅಕ್ಕ, ಖಾಜಿ ಹನೀಫ್, ಹಟ್ಟಿ ಚಿನ್ನದ ಗಣಿಯ ಮಾಜಿ ಅಧ್ಯಕ್ಷ ಎನ್. ಗಿರಿಜಾ ಶಂಕರ, ಪ.ಪಂ.ಅಧ್ಯಕ್ಷ ಹಾಜಿ ಚೌದ್ರಿ ಡಾ.ಎ.ವೀರೇಂದ್ರ ಸಾಹುಕಾರ್, ವಕೀಲ್ ತಾಯಣ್ಣ, ಶಾಂತಿಮೂರ್ತಿ ಸ್ವಾಮಿ ವೇದಿಕೆ ಮೇಲೆ ಇದ್ದರು. ಆರ್ ಕೆ ಬಸವರಾಜ, ಕಲ್ಲೂರು ಬಸವರಾಜ ನಾಯಕ,ಎನ್.ಚಂದ್ರಶೇಖರ, ಹೆಚ್ ಕೆ ಅಮರೇಶ,ಶಿವಗ್ಯಾನಿ ಎಂ.ಪ್ರಕಾಶ, ಪರಶುರಾಮ ಸರೋದೆ, ವೆಂಕಟೇಶ ದೊರೆ, ಲಿಂಗಯ್ಯ ಶಾವಂತಗಲ್,ಎಸ್ ಕೆ ಟೈಲರ್, ನಾಗೇಶ, ಹನುಮಂತನಾಯಕ ನಾರಬಂಡ, ಚಂದ್ರಶೇಖರ ಹಡಪದ್, ಮಹೇಶ,ರಾಜಭೋವಿ, ಪ.ಪಂ.ಸದಸ್ಯರು, ರಾಜಕೀಯ ಪಕ್ಷಗಳ ಮುಖಂಡರು, ಆಟೋ ಚಾಲಕರು, ಯುವಕರು, ಸಮಾಜದ ಮುಖಂಡರು ಸೇರಿದಂತೆ ಸಾವಿರಾರು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ

ಈ ಭಾಗದ ಸಮಸ್ಯೆಗಳನ್ನು ಬಗ್ಗೆಹರಿಸಲು ಪತ್ರಕರ್ತರು ನಮಗೆ ಮಾರ್ಗದರ್ಶಕರು ಆಗಿದ್ದಾರೆ. ರಾಯಚೂರಿನಲ್ಲಿ ಬರುವ ದಿನಗಳಲ್ಲಿ ನಡೆಯುವ ರಾಜ್ಯ ಮಟ್ಟದ ಸಮ್ಮೇಳನದ ಯಶಸ್ವಿಗೆ ನಾವೆಲ್ಲ ಕೂಡಿ ಶ್ರಮಿಸೋಣ. ಪತ್ರಕರ್ತರ ಸಮಸ್ಯೆಗಳನ್ನು ಹಂತಹಂತವಾಗಿ ಸರ್ಕಾರದ ಮಟ್ಟದಲ್ಲಿ ಬಗೆ ಹರಿಸಲಾಗುವುದು. ಈ ಭಾಗವು ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಇಲ್ಲಿನ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಲು ಪತ್ರಿಕೋದ್ಯಮ ಕ್ಷೇತ್ರವು ಅತ್ಯವಶ್ಯವಾಗಿದೆ. ಪತ್ರಕರ್ತರ ಸಂಘದಿಂದ ಮಾಡುವ ಕೆಲಸ ಕಾರ್ಯಗಳಿಗೆ ನಾವು ಬೆಂಬಲವಾಗಿ ನಿಲ್ಲುವುದಾಗಿ ಹೇಳಿದರು.

ಈ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಮಾತನಾಡಿ, ರಾಯಚೂರಿನಲ್ಲಿ ರಾಜ್ಯ ಮಟ್ಟದ ಸಮ್ಮೇಳನ ಆಯೋಜನೆ ಕುರಿತು ನಿರಂತರವಾಗಿ ದಾವಣಗೆರೆ, ತುಮಕೂರು ಹಾಗೂ ಬೀದರ್ ಜಿಲ್ಲೆಯಲ್ಲಿ ನಡೆದ ಸಮ್ಮೇಳನದಲ್ಲಿ ರಾಯಚೂರಿನ ಜಿಲ್ಲಾಧ್ಯಕ್ಷರು ಹಕ್ಕೊತ್ತಾಯ ಮಾಡಿದರು. ಪತ್ರಕರ್ತರ ವೃತ್ತಿ ಎದುರಿಗಿರುವ ಸಮಸ್ಯೆಗಳ ಕುರಿತು ಬೆಳಕು ಚೆಲ್ಲಬೇಕಾಗಿದೆ. ಬ್ಲಾಕ್ ಮೇಲ್ ಮಾಡುವ ಪತ್ರಕರ್ತರ ಅಗತ್ಯ ನಮಗೆ ಇಲ್ಲ. ಜನರ ಸಮಸ್ಯೆಗೆ ಧ್ವನಿಯಾಗುವ ಪತ್ರಕರ್ತರ ನಮಗೆ ಬೇಕು. ಅಭಿವೃದ್ಧಿಗೆ ಶ್ರಮಿಸಬೇಕು. ನೀವು ಬರೆದ ವರದಿಗಳು, ವಿಧಾನ ಸೌಧ, ಜಿಲ್ಲಾ ಪಂಚಾಯತಿಗಳಲ್ಲಿ ಚರ್ಚೆಯಾಗಬೇಕು. ವೃತ್ತಿಯನ್ನು ಸ್ವಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಬಾರದು. ಅಂದಿನಿಂದ ಇಂದಿನವರೆಗೂ ಮಾಧ್ಯಮ ಕ್ಷೇತ್ರದ ಮೇಲೆ ಜನರ ಅಪಾರ ನಂಬಿಕೆ ಇದೆ. ಆ ನಂಬಿಕೆಯನ್ನು ಮುಂದುವರಿಸಬೇಕು. ಜಿಲ್ಲೆಯ ಅಭಿವೃದ್ಧಿಗೆ ಪತ್ರಿಕೋದ್ಯಮ ಕ್ಷೇತ್ರದ ಕೊಡುಗೆ ಇರಬೇಕು. ಇಂದಿನ ದಿನಮಾನಗಳಲ್ಲಿ ಸೋಷಿಯಲ್ ಮಿಡಿಯಾ ಪ್ರಭಾವ ಹೆಚ್ಚಾಗಿದೆ. ಇದು ಮಾಧ್ಯಮ ಕ್ಷೇತ್ರಕ್ಕೆ ಎಚ್ಚರಿಕೆ ಘಂಟೆಯಾಗಿದೆ. ಎಪ್ಪತ್ತರ ಕಾಲಘಟ್ಟದ ಪತ್ರಕರ್ತರು ಇಂದಿಗೂ ಬದ್ಧತೆ ಇಟ್ಟುಕೊಂಡಿದ್ದಾರೆ. ತಾವು ವೃತ್ತಿಯ ಘನತೆ ಕಾಪಾಡಿಕೊಳ್ಳಬೇಕು. ನಮ್ಮ ಮನೆಯನ್ನು ನಾವೇ ಸ್ವಚ್ಛತೆಗೊಳ್ಳಿಸಬೇಕು. ಕ್ರಿಮಿನಲ್ ಪತ್ರಕರ್ತರನ್ನು ಸಂಘದ ಹೊರಹಾಕಿ, ವೈಯಕ್ತಿಕ ಚಟುವಟಿಕೆಗಳನ್ನು ವೃತ್ತಿಯಲ್ಲಿ ಮಾಡಿಬಾರದು. ಸಮಾಜ ಸುಧಾರಣೆಗೆ ನಮ್ಮ ಶ್ರಮವಿದೆ. ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶಗಳನ್ನು ಪಾಲಿಸಬೇಕು. ಸಮಾಜವನ್ನು ಕೂಡಿಸುವ ಕೆಲಸ ಪತ್ರಕರ್ತರಿಂದ ಆಗಬೇಕಾಗಿದೆ ಎಂದರು.

ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಕಾರ್ಯಕ್ರಮದಲ್ಲಿ ವಿಶೇಷ ಸನ್ಮಾನ ಸ್ವೀಕರಿಸಿ, ಮಾತನಾಡಿ, ರಾಯಚೂರಿನ ಪತ್ರಕರ್ತರಿಗೆ ರಾಜ್ಯದಲ್ಲಿ ತನ್ನಯಾದ ಗೌರವ ಇದೆ. ಪತ್ರಕರ್ತರು ತಮ್ಮ ಸೇವೆಯನ್ನು ಗೌರವದಿಂದ ಕಾಣಬೇಕು. ನಾನು ದೇವದುರ್ಗ ತಾಲೂಕಿನ ಸಣ್ಣ ಹಳ್ಳಿಯಿಂದ ಬಂದು ಬೆಂಗಳೂರಿನವರೆಗೂ ಕೆಲಸ ಮಾಡಲು ಈ ವೃತ್ತಿ ನನಗೆ ಬೆಳೆಸಿದೆ. ಪತ್ರಕರ್ತರ ಯಾವುದೇ ಸಮಸ್ಯೆಗಳು ನಮ್ಮ ಹಂತದಲ್ಲಿ ಬಗೆಹರಿಸಿಕೊಳ್ಳುವ ಮೂಲಕ ನಮ್ಮ ಜಿಲ್ಲೆಯಲ್ಲಿ ನಡೆಯುವ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಎಲ್ಲರೂ ಸೇರಿ ಯಶಸ್ವಿಯಾಗಿ ನಡೆಸಬೇಕು. ನನ್ನ ವ್ಯಾಪ್ತಿಯ ಇತಿಮಿತಿಯಲ್ಲಿ ನಾನು ಇದಕ್ಕೆ ಸಹಕಾರ ನೀಡುತ್ತೇನೆ. ಇಂದು ನನ್ನ ಮಾತೃ ಪತ್ರಕರ್ತರ ಸಂಘದಿಂದ ಸನ್ಮಾನಿಸಿಕೊಳ್ಳುತ್ತಿರುವುದರಿಂದ ನನಗೆ ತುಂಬಾ ಸಂತೋಷವಾಗಿದೆ ಎಂದರು.

ಇದಕ್ಕೂ ಮುಂಚೆ ಪ್ರಸ್ತಾವಿಕವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್.ಗುರುನಾಥ ಅವರು ಮಾತನಾಡಿ, ನಮ್ಮ ಸಂಘವು ಅತಿಹೆಚ್ಚು ಸದಸ್ಯರನ್ನು ಹೊಂದಿದೆ. ಪತ್ರಿಕಾ ವಲಯವು ಸ್ವಾತಂತ್ರ ಹೋರಾಟದ ಸಮಯದಲ್ಲಿ ಸೇವಾ ಮನೋಭಾವ ಹೊಂದಿತ್ತು. ಆದರೆ ಇಂದು ಉದ್ಯಮವಾಗಿ ಬೆಳೆದಿದೆ. ಗ್ರಾಮೀಣ ಭಾಗದ ಪತ್ರಕರ್ತರಿಗೆ ಬಸ್ ಪಾಸ್ ಬಿಟ್ಟರೆ ಬೇರೆ ಯಾವುದೇ ಸೌಲಭ್ಯಗಳನ್ನು ಪತ್ರಕರ್ತರಿಗೆ ಸಿಗುತ್ತಿಲ್ಲ. ಬೇರೆ ರಾಜ್ಯಗಳಿಗೆ ಹೋಲಿಸಿದ್ದಲ್ಲಿ ನಮ್ಮ ರಾಜ್ಯದಲ್ಲಿ ಪತ್ರಕರ್ತರಿಗೆ ಸೇವಾ ಭದ್ರತಾ ದೊರಕಿಲ್ಲ. ಬೆಂಗಳೂರು ನಗರದ ಪತ್ರಕರ್ತರಿಗೆ ಮಾತ್ರ ನಿವೇಶನ ನೀಡಲಾಗಿದೆ. ರಾಜ್ಯದ ಗ್ರಾಮೀಣ ಪತ್ರಕರ್ತರಿಗೂ ಇದು ವಿಸ್ತರಣೆ ಮಾಡಬೇಕು. ರಾಯಚೂರಿನಲ್ಲಿ 41ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನ ಆಯೋಜನೆ ಮಾಡಲಾಗುತ್ತಿದೆ. ಎಲ್ಲ ಪತ್ರಕರ್ತರು ರಾಜ್ಯ ಮಟ್ಟದ ಸಮ್ಮೇಳನದ ಯಶಸ್ವಿಗೆ ಸಹಕಾರ ನೀಡಬೇಕೆಂದರು.

ಜಿಲ್ಲೆಯ ವಿವಿಧ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ: ದಿ. ಶ್ರೀ ಎನ್.ಕೆ.ಕುಲಕರ್ಣಿ ಸ್ಮರಣಾರ್ಥ ರಾಯಚೂರವಾಣಿ ಪ್ರಾಯೋಜಿತ ಜೀವಮಾನ ಸಾಧನೆ ವಿಶೇಷ ಪ್ರಶಸ್ತಿಗೆ ಈ ನಾಡು ಪತ್ರಿಕೆ ಹಿರಿಯ ವರದಿಗಾರಾದ ರಂಗನಾಥ ಚಕ್ರವರ್ತಿ, ಕಂಪಿಲವಾಣಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ರಾಯಚೂರು ಪ್ರಾಯೋಜಿತ ಪತ್ರಿಕಾ ರಂಗದ ಭೀಷ್ಮ ದಿ. ಶ್ರೀ ಕೆ. ಶಾಮರಾವ್ ಸ್ಮರಣಾರ್ಥ ಜೀವಮಾನ ಸಾಧನೆ ವಿಶೇಷ ಪ್ರಶಸ್ತಿಗೆ ರಾಯಚೂರಿನ ಹಿರಿಯ ಪತ್ರಕರ್ತರಾದ ಶಿವಮೂರ್ತಿ ಹಿರೇಮಠ ಹಾಗೂ ಮಸ್ಕಿ ವಿಜಯವಾಣಿ ವರದಿಗಾರರಾದ ವಿರೇಶ ಸೌದ್ರಿ ಅವರಿಗೆ ಮಲ್ಲಿಕಾರ್ಜುನ ಪಾಟೀಲ್ ಪ್ರಾಯೋಜಿತ ದಿ. ಶ್ರೀ ಶಿವಶಂಕರಗೌಡ ಪಾಟೀಲ್ ಯದ್ಧಲದಿನ್ನಿ ಸ್ಮರಣಾರ್ಥ ಜೀವಮಾನ ಸಾಧನೆ ವಿಶೇಷ ಪ್ರಶಸ್ತಿಯನ್ನು ನೀಡಲಾಯಿತು.

ಕನ್ನಡ ಪ್ರಭ ಪತ್ರಿಕೆಯ ಜಿಲ್ಲಾ ವರದಿಗಾರರಾದ ರಾಮಕೃಷ್ಣ ದಾಸರಿ, ಬಿಟಿವಿ ಜಿಲ್ಲಾ ವರದಿಗಾರ ಚಂದಪ್ಪ ದೋರನಹಳ್ಳಿ, ದೇವದುರ್ಗ ವಿಜಯ ಕರ್ನಾಟಕ ವರದಿಗಾರ ಸುರೇಶಗೌಡ, ಲಿಂಗಸುಗೂರು ಉದಯ ಕಾಲ ವರದಿಗಾರ ಹನುಮಂತ ಕನ್ನಾಳ, ಜಂಬೂದ್ವೀಪ ಸಂಪಾದಕ ರಾಜಶೇಖರ, ಕವಿತಾಳ ಬೆಂಕಿ ಬೆಳಕು ವರದಿಗಾರ ಆದೇಶ ನಗನೂರು, ಕಲ್ಯಾಣ ಸಂಜೆ ಪ್ರಧಾನ ಸಂಪಾದಕ ಈಶಪ್ಪ ಬೈಲ್‌ಮರ್ಚೆಡ್, ಬಳಗಾನೂರು ಸಂಯುಕ್ತ ಕರ್ನಾಟಕ ಬದ್ರಿನಾಥ, ಸಿಂಧನೂರು ಬಳ್ಳಾರಿ ಬೆಳಗಾಯಿತು ವರದಿಗಾರ ಬೀರಪ್ಪ, ಮೇಘಾ ಚಾನಲ್ ಕ್ಯಾಮರಾಮೆನ್ ಶಿವಕುಮಾರ್, ಟೈಮ್ಸ್ ಆಫ್ ಇಂಡಿಯಾ ಜಾಹೀರಾತು ವಿಭಾಗದ ಮಂಜುನಾಥ ಎತ್ತಿನಮಾಳಗಿ ಅವರಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವಾರ್ಷಿಕ ಪ್ರಶಸ್ತಿ ಹಾಗೂ ವಿಜಯ ಕರ್ನಾಟಕ ಜಿಲ್ಲಾ ವರದಿಗಾರ ಮಂಜುನಾಥ ಸಾಲಿ, ಹೊಸ ದಿಗಂತ ಜಿಲ್ಲಾ ವರದಿಗಾರ ವಾಗೀಶ್ ಪಂಡಿತರಾಧ್ಯ ವಿ ಪಾಟೀಲ್, ಈಶಾನ್ಯ ಟೈಮ್ಸ್ ಜಿಲ್ಲಾ ವರದಿಗಾರ ಗೌಡಪ್ಪ ಗೌಡ, ಪ್ರಜಾಪ್ರಗತಿ ಜಿಲ್ಲಾ ವರದಿಗಾರ ಶಶಿಧರ ಅಂಗಡಿ, ಈಶಾನ್ಯ ವಾರ್ತೆ ಜಿಲ್ಲಾ ವರದಿಗಾರ ಖಾಜಾ ಹುಸೇನ್, ರಿಪಬ್ಲಿಕ್ ಕನ್ನಡ ಕ್ಯಾಮೆರಾಮೆನ್ ದುರುಗೇಶ, ಟಿವಿ 9 ಕ್ಯಾಮರಾಮೆನ್ ವಾಸುದೇವ ಎಸ್., ಅವರಿಗೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವಾರ್ಷಿಕ ಪ್ರಶಸ್ತಿ ನೀಡಲಾಯಿತು.

ಇದಕ್ಕೂ ಮುಂಚೆ ಪತ್ರಿಕೋದ್ಯಮ ಕ್ಷೇತ್ರದ ಭೀಷ್ಮ ಡಿ.ವಿ.ಗುಂಡಪ್ಪ ಅವರಿಗೆ ಪುಷ್ಪ ನಮನ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಮಾನವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ್, ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ಸೋಮಶೇಖರ ಕರೆಗೂಡು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿಯ ಸದಸ್ಯರಾದ ಅರವಿಂದ್ ಕುಲಕರ್ಣಿ, ಬಸವರಾಜ ನಾಗಡದಿನ್ನಿ, ಜಿಲ್ಲಾ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಚನ್ನಬಸವ, ಕಲಬುರಗಿ ಜಿಲ್ಲಾಧ್ಯಕ್ಷರಾದ ಬಾಬುರಾವ್ ಯಡ್ರಾಮಿ ಸೇರಿದಂತೆ ಜಿಲ್ಲಾ ಸಮಿತಿಯ ವಿವಿಧ ಪದಾಧಿಕಾರಿಗಳು, ಜಿಲ್ಲೆಯ ವಿವಿಧ ತಾಲೂಕಿನ ಅಧ್ಯಕ್ಷರು, ಕಾರ್ಯದರ್ಶಿಗಳು, ಹಿರಿಯ ಪತ್ರಕರ್ತರು, ಯುವ ಪತ್ರಕರ್ತರು ಸೇರಿದಂತೆ ಇತರರು ಇದ್ದರು.

# ನ್ಯಾಯಬೆಲೆ ಅಂಗಡಿ ಸಮಯ ಪಾಲನೆಗೆ ವೀಕಸೇ ಅಗ್ರಹ

**ಜೇವರಗಿ,ಜು 28:** ತಾಲೂಕಿನಲ್ಲಿರುವ ನ್ಯಾಯಬೆಲೆ ಅಂಗಡಿಗಳು ಸರ್ಕಾರ ನಿಗದಿಪಡಿಸಿದ ಸಮಯ ಪಾಲನೆ ಮಾಡಬೇಕೆಂದು ಜೇವರ್ಗಿ ಆಹಾರ ನಿರೀಕ್ಷಣಾಧಿಕಾರಿಗಳಿಗೆ ವೀರ ಕನ್ನಡಿಗರ ಸೇನೆ ಮನವಿ ಪತ್ರ ಸಲ್ಲಿಸಿದೆ. ಸರ್ಕಾರ ಕಳೆದ ತಿಂಗಳು ಹೊರಡಿಸಲಾದ ಆದೇಶದಂತೆ ಪ್ರತಿ ದಿನ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನ್ಯಾಯಬೆಲೆ ಅಂಗಡಿಗಳು ತೆರೆದಿರಬೇಕೆಂದು ಸರ್ಕಾರ ಸಮಯ ನಿಗದಿ ಮಾಡಿದೆ ಇದರಿಂದ ಗ್ರಾಮೀಣ ಪ್ರದೇಶದ ಜನ ತಮ್ಮ ಕೃಷಿ ಕೆಲಸಕ್ಕೆ ಹೋಗುವ ಮುಂಚೆ ಬೆಳಿಗ್ಗೆ ಆಹಾರ ಪದಾರ್ಥ (ರೇಷನ್)ತೆಗೆದುಕೊಂಡು ಹೋಗಬಹುದು ಹಾಗೆಯೇ ಕೃಷಿ ಕೆಲಸ ಮುಗಿಸಿ ಬಂದು ರಾತ್ರಿ ಸಮಯದಲ್ಲಿಯು ಸಹ ರೇಷನ್ ತೆಗೆದುಕೊಳ್ಳಬಹುದು ಜೊತೆಗೆ ನಗರ ಪ್ರದೇಶದಲ್ಲಿರುವವರು ಸಹ ತಮ್ಮ ಕೆಲಸಕ್ಕೆ ಹೋಗುವ ಮೊದಲು ಕೆಲಸ ಮುಗಿದ ನಂತರವೂ ಸಹ ರೇಷನ್ ತೆಗೆದುಕೊಂಡು ಹೋಗಲು ಅನುಕೂಲವಾಗಿದೆ ಯಾವ ನ್ಯಾಯಬೆಲೆ ಅಂಗಡಿ ಸಮಯ ಪಾಲನೆ ಮಾಡುವುದಿಲ್ಲವೋ ಅಂತಹ ನ್ಯಾಯಬೆಲೆ ಅಂಗಡಿಯವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ನಿರ್ಲಕ್ಷ ತೋರಿದರೆ ತಮ್ಮ ಕಾರ್ಯಾಲಯದ ಮುಂದೆ ಸಮಯ ಪಾಲನೆ ಮಾಡದ



ನ್ಯಾಯಬೆಲೆ ಅಂಗಂಡಿಯ ಗ್ರಾಹಕರು ಕೂಡಿ ಸಂಘಟನೆ ನೇತೃತ್ವದಲ್ಲಿ ಹೋರಾಟ ಮಾಡಬೇಕಾಗುತ್ತದೆ ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಜೇವರ್ಗಿ ವೀರ ಕನ್ನಡಿಗರ ಸೇನೆಯ ತಾಲೂಕಾಧ್ಯಕ್ಷ ಪರಮೇಶ್ವರ ನಾಯಕ ಬಿರಾಳ. ಕಾರ್ಯಧ್ಯಕ್ಷ ಸಿದ್ದಣ್ಣಗೌಡ ಮಾವನೂರ. ಉಪಾಧ್ಯಕ್ಷ ವೆಂಕಟೇಶ್ ಪಟ್ಟೆದಾರ. ನಗರ ಘಟಕ ಗೌರವಧ್ಯಕ್ಷ ಗಾಲಿಬ್ ಗಾಯಕವಾಡ ಇದ್ದರು

# ನಮಸ್ಕಾರ ಕನ್ನಡಿಗರಿಗೆ.
# ಬರಹಗಳಲ್ಲಿ ಭಾವನೆ... ಭಾವನೆಗಳಲ್ಲಿ ಬದುಕು...

## ಇಂದು ಜುಲೈ 29ರ ಗುರುಪೂರ್ಣಿಮೆಯ ಹಾರ್ದಿಕ ಶುಭಾಶಯಗಳು.

"ತಾಯಿಯೇ ಮೊದಲ ಗುರು, ಮನೆಯೇ ಮೊದಲ ಪಾಠಶಾಲೆ." ನಮ್ಮ ಜೀವನದ ಮೊದಲ ಪಾಠವನ್ನು ಕಲಿಸುವವರು ತಾಯಿ. ಪ್ರತಿಯೊಂದು ಮಗು ಮೊದಲು ಉಚ್ಚರಿಸುವ ಪದ "ಅಮ್ಮ". ಆ ಒಂದು ಪದವನ್ನು ಮಗುವಿನ ಬಾಯಿಂದ ಕೇಳುವ ಕ್ಷಣವೇ ತಾಯಿಗೆ ಜೀವನದ ಅತ್ಯಂತ ಸಂತಸದ ಕ್ಷಣ.

ನಂತರ ಜೀವನದ ಜವಾಬ್ದಾರಿಗಳನ್ನು ಹೇಗೆ ನಿಭಾಯಿಸಬೇಕು, ಹೇಗೆ ದೃಢವಾಗಿ ಬದುಕಬೇಕು ಎಂದು ಕಲಿಸುವವರು ತಂದೆ. ಆದ್ದರಿಂದ ತಂದೆಯೂ ನಮ್ಮ ಜೀವನದ ಮತ್ತೊಬ್ಬ ಶ್ರೇಷ್ಠ ಗುರು.

ಅದರ ನಂತರ ಶಾಲೆಗೆ ಸೇರಿದಾಗ ಶಿಕ್ಷಕರು ನಮ್ಮ ಅಜ್ಞಾನವೆಂಬ ಕತ್ತಲೆಯನ್ನು ದೂರ ಮಾಡಿ, ಜ್ಞಾನದ ಬೆಳಕಿನ ಕಡೆಗೆ ಕೊಂಡೊಯ್ಯುತ್ತಾರೆ. ಅವರು ಕೇವಲ ಪುಸ್ತಕದ ಪಾಠವನ್ನಷ್ಟೇ ಅಲ್ಲ, ಲೋಕಜ್ಞಾನ, ಸಂಸ್ಕಾರ ಮತ್ತು ಉತ್ತಮ ಮೌಲ್ಯಗಳನ್ನು ಸಹ ಕಲಿಸುತ್ತಾರೆ.

ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಗುರುಗಳಿಗೆ ಕೃತಜ್ಞತೆ ಸಲ್ಲಿಸಲು ಗುರುಪೂರ್ಣಿಮೆಯ ದಿನ ಅತ್ಯಂತ ಪವಿತ್ರವಾದ ದಿನ.

ಶಾಲೆಯಲ್ಲಿ ಪಾಠ ಹೇಳುವ ಶಿಕ್ಷಕರು ಮಾತ್ರವಲ್ಲ, ನಮ್ಮ ಜೀವನದಲ್ಲಿ ಬಂದು ಹೋಗುವ ಅನೇಕ ವ್ಯಕ್ತಿಗಳೂ ಮರೆಯಲಾಗದ ಪಾಠಗಳನ್ನು ಕಲಿಸುತ್ತಾರೆ. ಕೆಲವರು ತಮ್ಮ ಒಳ್ಳೆಯತನದಿಂದ, ಇನ್ನೂ ಕೆಲವರು ತಮ್ಮ ವರ್ತನೆಯ ಮೂಲಕ ಜೀವನದ ಅಮೂಲ್ಯ ಅನುಭವಗಳನ್ನು ನೀಡುತ್ತಾರೆ. ಅವರಿಗೆಲ್ಲ ನಮ್ಮ ಧನ್ಯವಾದಗಳು. ಏಕೆಂದರೆ, ಯಾವ ಶಾಲೆಯಲ್ಲೂ ಕಲಿಯಲಾಗದ ಅನೇಕ ಪಾಠಗಳನ್ನು ಜೀವನವೇ ನಮಗೆ ಸುಲಭವಾಗಿ ಕಲಿಸುತ್ತದೆ.

ಇಂದು ಗುರುಪೂರ್ಣಿಮೆಯ ಈ ಪವಿತ್ರ ದಿನದಂದು ನಮಗೆ ಜ್ಞಾನ, ಸಂಸ್ಕಾರ, ಮೌಲ್ಯಗಳು ಮತ್ತು ಬದುಕಿನ ದಾರಿಯನ್ನು ತೋರಿಸಿದ ಎಲ್ಲ ಗುರುಗಳ ಪಾದಗಳಿಗೆ ನನ್ನ ಹಣೆ ಹಚ್ಚಿ ನಮಸ್ಕರಿಸುತ್ತೇನೆ. ಹೃದಯಪೂರ್ವಕ ಕೃತಜ್ಞತೆಗಳು ಹಾಗೂ ಅನಂತ ವಂದನೆಗಳು.


ತಾಯಿ ಪ್ರೀತಿ, ಮಮತೆ, ತ್ಯಾಗ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುವ ಗುರು.

ತಂದೆ ಜವಾಬ್ದಾರಿ, ಶಿಸ್ತು ಮತ್ತು ಜೀವನವನ್ನು ಕಟ್ಟಿಕೊಳ್ಳುವ ಮಾರ್ಗವನ್ನು ಕಲಿಸುವ ಗುರು.

ಅಣ್ಣ–ತಮ್ಮ ಕಷ್ಟದ ಸಮಯದಲ್ಲಿ ಧೈರ್ಯ ತುಂಬಿ ಬೆಂಬಲವಾಗಿ ನಿಲ್ಲುವ ಗುರುಗಳು.

ಅಜ್ಜಿ–ತಾತ ಅನುಭವದ ಮೂಲಕ ಬದುಕಿನ ಅಮೂಲ್ಯ ಪಾಠಗಳನ್ನು ಕಲಿಸುವ ಜ್ಞಾನದ ಭಂಡಾರ.

ಹೀಗೆ ನಮ್ಮ ಜೀವನದಲ್ಲಿ ಪ್ರತಿಯೊಬ್ಬರೂ ಒಂದಲ್ಲೊಂದು ರೀತಿಯಲ್ಲಿ ಗುರುಗಳಾಗುತ್ತಾರೆ. ಅವರಿಂದ ಒಳ್ಳೆಯದನ್ನು ಕಲಿತು ಜೀವನದಲ್ಲಿ ಅಳವಡಿಸಿಕೊಂಡರೆ ನಮ್ಮ ಬದುಕು ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಕೂಡಿರುತ್ತದೆ.




ಎಲ್ಲರಿಗೂ ಗುರು ಪೂರ್ಣಿಮೆಯ ಹಾರ್ದಿಕ ಶುಭಾಶಯಗಳು

**ಲೇಖನ–ಗಂಗಾ**

# ನಿಗದಿತ ಸಮಯಕ್ಕೆ 371 (ಜೆ) ಪ್ರಮಾಣ ಪತ್ರ ವಿತರಿಸಲು ಆಗ್ರಹ

**ಅಫಜಲಪುರ:** ಭಾರತೀಯ ಸಂವಿಧಾನದ ಅನುಚ್ಛೇದ 371 (ಜೆ) ಕರ್ನಾಟಕದ ಕಲ್ಯಾಣ ಕರ್ನಾಟಕ ಪ್ರದೇಶದ (ಹಿಂದಿನ ಹೈದರಾಬಾದ್–ಕರ್ನಾಟಕ ಪ್ರದೇಶ) ಅಭಿವೃದ್ಧಿಗಾಗಿ ವಿಶೇಷ ನಿಯಮಗಳನ್ನು ಒದಗಿಸುತ್ತದೆ ಎಂದು 371 (ಜೆ) ಪ್ರಮಾಣ ಪತ್ರ ಪಡೆಯಲು ಅರ್ಜಿ ಸಲ್ಲಿಸಿದ ಅಭ್ಯರ್ಥಿ ಶ್ವೇತಾ ಸಾತಲಿಂಗಪ್ಪ ಬಬಲೇಶ್ವರ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 371 (ಜೆ) ನ ಮುಖ್ಯ ಉದ್ದೇಶವೆಂದರೆ ಶಿಕ್ಷಣದಲ್ಲಿ ಸ್ಥಳೀಯ ವಿದ್ಯಾರ್ಥಿಗಳಿಗೆ ವಿಶೇಷ ಮೀಸಲಾತಿ. ಸರ್ಕಾರಿ ಉದ್ಯೋಗಗಳಲ್ಲಿ ಸ್ಥಳೀಯರಿಗೆ ಮೀಸಲಾತಿ.ಶಿಕ್ಷಣ, ಉದ್ಯೋಗ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಮುಂತಾದ ವಿಶೇಷ ಕ್ರಮಗಳಾಗಿವೆ.

ಈ ಅನುಚ್ಛೇದವನ್ನು 2012ರಲ್ಲಿ 98ನೇ ಸಂವಿಧಾನ ತಿದ್ದುಪಡಿ ಕಾಯ್ದೆ ಮೂಲಕ ಸೇರಿಸಲಾಯಿತು ಮತ್ತು ಇದು ಕರ್ನಾಟಕದ ಹಿಂದುಳಿದ ಪ್ರದೇಶಗಳ ಸಮತೋಲನ ಅಭಿವೃದ್ಧಿಗೆ ಸಹಾಯ ಮಾಡುವ ಉದ್ದೇಶ ಹೊಂದಿದ್ದು, ಇದರಲ್ಲಿ ಒಳಗೊಂಡಿರುವ ಹಿಂದುಳಿದ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ಬೀದರ್ ಜಿಲ್ಲೆಯ ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳಿಗೆ ನಿಗದಿತ ಸಮಯಕ್ಕೆ 371 (ಜೆ) ಪ್ರಮಾಣ ಪತ್ರ ವಿತರಿಸಲು ತಾಲೂಕು ಮತ್ತು ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿ ವರ್ಗ ವಿಳಂಬ ಮಾಡುತ್ತಿರುವುದರಿಂದ ಅಭ್ಯರ್ಥಿಗಳು ನೌಕರಿ ಮತ್ತು ವಿಶೇಷ ಮೀಸಲಾತಿಯಿಂದ ವಂಚಿತರಾಗಿದ್ದಾರೆ.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ನಂತರ ಸಹಾಯಕ ಆಯುಕ್ತರ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಲು ಇಲ್ಲಿನ ತಾಲೂಕು ಆಡಳಿತದ ಸಿಬ್ಬಂದಿ ವರ್ಗ ವಿಳಂಬ ಮಾಡುತ್ತಿರುವುದರಿಂದ ಸರ್ಕಾರಿ ನೌಕರಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ನಿಗದಿತ ಸಮಯಕ್ಕೆ ಪ್ರಮಾಣ ಪತ್ರಗಳು ಸಿಗುತ್ತಿಲ್ಲ ಹಾಗೂ ಕಲಬುರ್ಗಿ ಸಹಾಯಕ ಆಯುಕ್ತರ ಕಚೇರಿಯಲ್ಲಿ ಈಗಾಗಲೇ ಅಫಜಲಪುರದ ಸುಮಾರು 69 ಅರ್ಜಿಗಳು ಉಳಿದಿವೆ. ನಿಗದಿತ ಸಮಯಕ್ಕೆ ಪ್ರಮಾಣ ಪತ್ರಗಳು ಅಭ್ಯರ್ಥಿಗಳ ಕೈ ಸೇರಿದರೆ 371 (ಜೆ) ನ ಉದ್ದೇಶ ಸಫಲವಾಗಲಿದೆ. ಹೀಗಾಗಿ ಈ ಕೂಡಲೇ ರಾಜ್ಯ ಸರ್ಕಾರ, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಸಹಾಯ ಆಯುಕ್ತರು, ತಹಸೀಲ್ದಾರರು ಕೂಡಲೇ ಸೂಕ್ತ ಕ್ರಮ ಕೈಗೊಂಡು ಪ್ರಮಾಣ ಪತ್ರಗಳು ನಿಗದಿತ ಸಮಯಕ್ಕೆ ಅಭ್ಯರ್ಥಿಗಳಿಗೆ ದೊರಕುವಂತೆ ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕು ಎಂದು ಒತ್ತಾಯ ಮಾಡಿದ್ದಾರೆ.


# ಸಂಪುಟ ವಿಸ್ತರಣೆ: ರಾಹುಲ್ ಜೊತೆ ರಾಜ್ಯ ನಾಯಕರ ಚರ್ಚೆ

**ಬೆಂಗಳೂರು. ಜು. 28–** ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಚರ್ಚೆಗೆ ಕೊನೆಗೂ ಸಮಯ ನಿಗದಿಯಾಗಿದ್ದು, ಇಂದು ರಾತ್ರಿ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರು ಸಂಪುಟ ವಿಸ್ತರಣೆ ಬಗ್ಗೆ ರಾಜ್ಯ ನಾಯಕರೊಂದಿಗೆ ಸಭೆ ನಡೆಸುವರು.

ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ವರಿಷ್ಠರ ಜತೆ ಚರ್ಚೆ ನಡೆಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ನಿನ್ನೆಯೇ ದೆಹಲಿಗೆ ತೆರಳಿದ್ದರಾದರೂ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇವರೆಲ್ಲಾ ಸಂಸತ್ ಅಧಿವೇಶನದ ಕಲಾಪ, ನೀಟ್ ಗದ್ದಲ ಇವುಗಳಲ್ಲಿ ಬ್ಯುಸಿಯಾಗಿದ್ದರಿಂದ ನಿನ್ನೆ ಸಂಪುಟ ವಿಸ್ತರಣೆಯ ಬಗ್ಗೆ ಚರ್ಚೆ ನಡೆಸಲು ಸಾಧ್ಯವಾಗಲಿಲ್ಲ.

ಇಂದು ರಾತ್ರಿ 8 ಗಂಟೆಗೆ ರಾಹುಲ್‌ಗಾಂಧಿಯವರು ಸಂಪುಟ ವಿಸ್ತರಣೆ ಬಗ್ಗೆ ಚರ್ಚಿಸಲು ಕಾಲಾವಕಾಶ ನೀಡಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ ಇವರುಗಳೆಲ್ಲಾ ಈ ಸಭೆಯಲ್ಲಿ ಭಾಗಿಯಾಗುತ್ತಿದ್ದು, ಸಚಿವರ ಪಟ್ಟಿ ಬಹುತೇಕ ಇಂದು ಅಂತಿಮವಾಗಲಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಇವರುಗಳೆಲ್ಲಾ ಯಾರನ್ನೆಲ್ಲಾ ಸಚಿವರನ್ನಾಗಿಸಬೇಕು ಎಂಬ ಬಗ್ಗೆ ಹೈಕಮಾಂಡ್‌ಗೆ ಈಗಾಗಲೇ ಪಟ್ಟಿ ಸಲ್ಲಿಸಿದ್ದಾರೆ. ಈ ಮೂವರ ಪಟ್ಟಿಯಲ್ಲಿರುವ ಹೆಸರುಗಳು ಹಾಗೂ ಹೈಕಮಾಂಡ್‌ನ ಪಟ್ಟಿಯಲ್ಲಿರುವ ಹೆಸರುಗಳು ಎಲ್ಲವನ್ನು ಚರ್ಚಿಸಿ ನೂತನ



ಸಚಿವರ ಪಟ್ಟಿಯನ್ನು ಇಂದೇ ಅಂತಿಮಗೊಳಿಸಲಾಗುತ್ತದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

ನೂತನ ಸಚಿವರ ಪಟ್ಟಿ ಇಂದು ಅಂತಿಮವಾದರೆ ಗುರುವಾರ ಇಲ್ಲವೇ ಶುಕ್ರವಾರ ನೂತನ ಸಚಿವರ ಪದಗ್ರಹಣ ನಡೆಯಲಿದೆ.

ಸಿದ್ದರಾಮಯ್ಯ ಇಂದು ಬೆಳಿಗ್ಗೆ ಮೈಸೂರಿಗೆ: ಸಂಜೆ ಮತ್ತೆ ದೆಹಲಿಗೆ

ಸಂಪುಟ ವಿಸ್ತರಣೆಯ ಚರ್ಚೆಯಲ್ಲಿ ಪಾಲ್ಗೊಳ್ಳಲು ನಿನ್ನೆ ದೆಹಲಿಗೆ ತೆರಳಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವರಿಷ್ಠರು ಇಂದು ರಾತ್ರಿ 8 ಗಂಟೆಗೆ ಸಂಪುಟ ವಿಸ್ತರಣೆ ಚರ್ಚೆ ನಿಗದಿ ಮಾಡಿರುವುದರಿಂದ ಇಂದು ಮೈಸೂರಿನಲ್ಲಿ ನಡೆಯುವ ತಮ್ಮ ಪುತ್ರ ದಿ. ರಾಕೇಶ್ ಸಿದ್ದರಾಮಯ್ಯನವರ ಪುಣ್ಯ ಸ್ಮರಣೆಯಲ್ಲಿ ಭಾಗಿಯಾಗಲಿದ್ದಾರೆ.

ದೆಹಲಿಯಿಂದ ಮಧ್ಯಾಹ್ನ 12 ಗಂಟೆಗೆ ವಿಶೇಷ ವಿಮಾನದಲ್ಲಿ ಮೈಸೂರಿಗೆ ಆಗಮಿಸುವ ಸಿದ್ದರಾಮಯ್ಯನವರು ರಾಕೇಶ್ ಸಿದ್ದರಾಮಯ್ಯನವರ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂಜೆ ಮತ್ತೆ ಅದೇ ವಿಶೇಷ ವಿಮಾನದಲ್ಲಿ ದೆಹಲಿಗೆ ವಾಪಸ್ಸಾಗಿ ದೆಹಲಿಯಲ್ಲಿ ಇಂದು ರಾತ್ರಿ ನಡೆಯುವ ಸಂಪುಟ ವಿಸ್ತರಣೆಯ ಸಭೆಯಲ್ಲಿ ಭಾಗಿಯಾಗುವರು.

## ಹಡಪದ ಅಪ್ಪಣ್ಣ ಜಯಂತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ: ರೇವಣಸಿದ್ಧ ಹಡಪದ



**ಬೀದರ್ ಜು 28:**ಪ್ರತಿ ವರ್ಷದಂತೆ ಈ ವರ್ಷವು ಜುಲೈ 29 ರಂದು ಸರಕಾರದಿಂದ ನಡೆಯಲಿರುವ ಹಡಪದ ಅಪ್ಪಣ್ಣರವರ ಜಯಂತಿ ಕಾರ್ಯಕ್ರಮದಲ್ಲಿ ಸಮಾಜದ ಭಾಂದವರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹಡಪದ ಸಮಾಜದ ಯುವ ಮುಖಂಡ ರೇವಣಸಿದ್ಧ ಹಡಪದ ಮನವಿ ಮಾಡಿದ್ದಾರೆ.

ಇದೇ ಜುಲೈ 29 ರಂದು ಬೆಳಿಗ್ಗ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ 10:30 ಗಂಟೆಗೆ ಶಿವಾಜಿ ವೃತ್ತದಿಂದ ವಿವಿಧ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ.

ನಂತರ ಮದ್ಯಾಹ್ನ 1 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಆದರಿಂದ ಸಮಾಜದ ಭಾಂದವರು, ಸಂಘ ಸಂಸ್ಥೆಗಳ ಪ್ರಮುಖರು, ಹಾಗೂ ಸಾರ್ವಜನಿಕರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ರೇವಣಸಿದ್ಧ ಹಡಪದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ ಕಾರ್ಯಕ್ರಮ



**ಗದಗ, ಜು28:** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಜುಲೈ 30 ರಿಂದ ಅಗಸ್ಟ್ 1 ರವರೆಗೆ ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಜುಲೈ 30 ರಂದು ಸಂಜೆ 6 ಗಂಟಗೆ ಬಾಗಲಕೋಟೆಯಿಂದ ಡಿವಿ ವಾಹನದ ಮೂಲಕ ಹೊರಟು 8.30 ಗಂಟೆಗೆ ಗದಗ ಜಿಲ್ಲೆಗೆ ಆಗಮಿಸಿ ವಾಸ್ತವ್ಯ ಮಾಡುವರು.Time & Calendars

ಜುಲೈ 31 ರಂದು ಬೆಳಿಗ್ಗೆ 9 ಗಂಟೆಗೆ ಡಿವಿ ವಾಹನದ ಮೂಲಕ ಹೊರಟು 9.15 ಗಂಟೆಗೆ ಗದಗ ನಗರದಲ್ಲಿ ಇರುವ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡುವರು. ಬೆಳಿಗ್ಗೆ 10.15 ಗಂಟೆಗೆ ನವನಗರದಲ್ಲಿರುವ ಮಹಿಳಾಪೊಲೀಸ್ ಠಾಣೆಗೆ ಭೇಟಿ ನೀಡುವರು. 11 ಗಂಟೆಗೆ ಗದಗ ಜಿಲ್ಲಾ ಆಡಳಿತ ಭವನದಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿರುವ ಕಔಖಉೂ ಅಧಿನಿಯಮ 2013 ರ ತರಬೇತಿ ಕಾರ್ಯಾಗಾರ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸುವರು. ನಂತರ ಗದಗನಿಂದ ರೋಣ ಕ್ಕೆ ಆಗಮಿಸಿ ರೋಣ ನಗರದ ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಿರುವ ಪೂಜ್ಯ ಮಾತೋಶ್ರೀ ಬಸಮ್ಮನವರು ಸಂಗನಗೌಡರು ಪಾಟೀಲ ಇವರ ಎಪ್ಪತ್ತೆರಡನೆಯ ಪುಣ್ಯ ಸ್ಮರಣೋತ್ಸವದ ನಿಮಿತ್ಯ ಮಹಿಳಾ ಗೋಷ್ಠಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ರೋಣ ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡುವರು. ನಂತರ ಮಧ್ಯಾಹ್ನ 4.45 ಗಂಟೆಗೆ ಗದಗಗೆ ಆಗಮಿಸಿ ರಾಜೀವ ಗಾಂಧಿ ನಗರದಲ್ಲಿರುವ ಸುಡುಗಾಡು ಸಿದ್ಧ ಸಮುದಾಯದ ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿ ವಾಸ್ತವ್ಯ ಮಾಡುವರು.

ಅಗಸ್ಟ 1 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಆಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಹಿಳಾ ಸಂಘ ಉದ್ಘಾಟನೆ ಮಾಡುವರು ಹಾಗೂ ಗದಗ ನಗರದ ವಿವಿಧ ಕಾಲೇಜು ವಿದ್ಯಾರ್ಥಿನಿಯರೊಂದಿಗೆ ಸಂವಾದ ಮತ್ತು ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಖಉೂಫ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಹಾಗೂ ಪ್ರಕರಣಗಳು ದಾಖಲಾದ ಬಗ್ಗೆ , ಅಂಕಿ ಅಂಶಗಳೊಂದಿಗೆ ಚರ್ಚೆ, ಸರ್ಕಾರಿ, ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಆಂತರಿಕ ದೂರು ಸಮಿತಿ ಬಗ್ಗೆ ಪರಿಶೀಲನೆ , ಮಹಿಳಾ ದೌರ್ಜನ್ಯ ಪ್ರಕರಣಗಳ ಬಗ್ಗೆ ಚರ್ಚೆ, ಮಹಿಳಾ ರಿಸರ್ವೆಶನ್ , ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಬಗ್ಗೆ ಜಿಲ್ಲಾಡಳಿತ ತೆಗೆದುಕೊಂಡ ಕ್ರಮದ ಬಗ್ಗೆ ಚರ್ಚೆ ನಡೆಸುವರು ಎಂದು ರಾಜ್ಯ ಮಹಿಳಾ ಆಯೋಗದ ಪ್ರಕಟಣೆ ತಿಳಿಸಿದೆ.

## ಶ್ರದ್ಧೆಯಿಂದ ಅರಿತಾಗ ಮಾತ್ರ ವಿಶಿಷ್ಟ ಸಾಧನೆ ಸಾಧ್ಯ




**ಬಳ್ಳಾರಿ, ಜು.28:** ಆಸಕ್ತ ವಿಷಯವನ್ನು ಶ್ರದ್ಧೆಯಿಂದ ಅರಿತಾಗ ಮಾತ್ರ ವ್ಯಕ್ತಿ ವಿಶಿಷ್ಟ ಸಾಧನೆ ಮಾಡಲು ಸಾಧ್ಯವೆಂದು ಹಿರಿಯ ವರದಿಗಾರರಾದ ಕೆ.ಎಂ. ಮಂಜುನಾಥ ಅಭಿಪ್ರಾಯಪಟ್ಟರು.

ಜಿಲ್ಲಾ ಕಸಾಪ ವತಿಯಿಂದ ನಗರದ ಇಂಡೋ ಅಮೇರಿಕನ್ ಪದವಿ ಮತ್ತು ಪದವಿಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವ್ಯಾಕರಣ ಚಂದ್ರಶೇಖರಶಾಸ್ತ್ರಿಗಳ ಸ್ಮಾರಕ ದತ್ತಿ ಹಾಗೂ ದಿ. ಸಿರಿಗೇರಿ  ಬಸವರಾಜ ಸ್ಮಾರಕ ದತ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಾಹಿತ್ಯ ಮತ್ತು ಸಂಸ್ಕೃತಿಯ ಮೂಲಕ ಬದುಕನ್ನು ರೂಪಿಸಿಕೊಂಡವರು ಮಾತ್ರ ಜವಾಬ್ದಾರಿಯುತ ನಾಗರೀಕರಾಗಬಲ್ಲರೆಂದು ಕೆ.ಎಂ.  ಮಂಜುನಾಥ ತಿಳಿಸಿದರು.ಕನ್ನಡ ಸಾಹಿತ್ಯದಲ್ಲಿ ಸಾಮರಸ್ಯದ ನೆಲೆಗಳು ಕುರಿತು ವಿಶೇಷ ಉಪನ್ಯಾಸ ನೀಡಿದ ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾದ ಕೆ.ಬಿ. ಸಿದ್ಧಲಿಂಗಪ್ಪ ಅವರು ವೈರುಧ್ಯ ಮತ್ತು ವಿಷಮ ಪರಿಸ್ಥಿತಿಯಲ್ಲಿ ಬದುಕುತ್ತಿರುವ ನಾವುಗಳು ಸಮಾನತೆ ಮತ್ತು ಸೌಹಾರ್ದತೆಯ ನೆಲೆಗಳನ್ನು ಕನ್ನಡ ಸಾಹಿತ್ಯಲ್ಲಿ ವಿಫುಲವಾಗಿ ಗುರುತಿಸಬಹುದಾಗಿದೆ ಎಂದು ತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬಿ.ವಿ. ರಾಜೇಶ್ ಮಾತನಾಡುತ್ತಾ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಮ್ಮ ಕಾಲೇಜು ಸದಾ ಪ್ರೋತ್ಸಾಹ ನೀಡುತ್ತದೆ ಎಂದು ತಿಳಿಸಿದರು.ವೇದಿಕೆಯಲ್ಲಿ ಕೆ.ಎಸ್. ಆರ್.ಟಿ.ಸಿ. ಕಾರ್ಮಿಕ ಕಲ್ಯಾಣಾಧಿಕಾರಿ ಕರೇಗೌಡ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.ಪದವಿ  ಕಾಲೇಜಿನ ಪ್ರಾಂಶುಪಾಲರಾದ ಕೆ.ಪಿ. ಸುಧೀರ್, ಕಸಾಪ ಅಧ್ಯಕ್ಷ ಡಾ ನಿಷ್ಠಿ ರುದ್ರಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು.ರಂಗಭೂಮಿಯ ಹಿರಿಯ ಕಲಾವಿದರಾದ ಹೆಚ್.ಎಂ. ರಾಮೇಶ್ವರಯ್ಯ ಅವರನ್ನು ಸನ್ಮಾನಿಸಲಾಯಿತು.

ಕಸಾಪ ಕೋಶಾಧ್ಯಕ್ಷರಾದ ಬಸವರಾಜ ಗದಗಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಕಸಾಪ ಸಂಚಾಲಕರಾದ ಕಪ್ಪಗಲ್ಲು ಬಿ ಚಂದ್ರಶೇಖರಚಾರ್ ಸ್ವಾಗತಿಸಿದರು. ಇಂಡೋ ಅಮೆರಿಕನ್ ಪದವಿ ಕಾಲೇಜಿನ ಕನ್ನಡ ಅಧ್ಯಾಪಕರಾದ ಅಮಾತಿ ಬಸವರಾಜ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಜಾನಪದ ಕಲೆ ಉಳಿಸಿ ಬೆಳೆಸಲು ಎಲ್ಲರ ಸಹಕಾರ ಅಗತ್ಯ

**ಆಳಂದ:** ಗ್ರಾಮೀಣ ಬದುಕಿನ ಸಂಸ್ಕೃತಿ, ಪರಂಪರೆ ಹಾಗೂ ಜನಪದ ಕಲೆಯ ಶ್ರೀಮಂತಿಕೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ತಾಲೂಕಿನ ಶ್ರೀ ಯಲ್ಲಾಲಿಂಗ ಜಾನಪದ ಕಲಾ ಸಂಸ್ಥೆ (ರಿ), ನಸಿರವಾಡಿ ಆಶ್ರಯದಲ್ಲಿ ಆಯೋಜಿಸಿದ್ದ 'ಜಾನಪದ ಕಲಾಸೌರಭ' ಸಾಂಸ್ಕೃತಿಕ ಕಾರ್ಯಕ್ರಮ ನಸಿರವಾಡಿ ಗ್ರಾಮದ ಹನುಮಾನ ಮಂದಿರದಲ್ಲಿ ಸಂಭ್ರಮ-ಸಡಗರದಿಂದ ನಡೆಯಿತು.

ಕಾರ್ಯಕ್ರಮವನ್ನು ರೈತ ಅಂಬರಾಯ ತುಕಾಗೊಳ ಉದ್ಘಾಟಿಸಿ ಮಾತನಾಡಿ, ಜಾನಪದ ಕಲೆಗಳು ನಮ್ಮ ನಾಡಿನ ಸಂಸ್ಕೃತಿ, ಸಂಪ್ರದಾಯ ಮತ್ತು ಜೀವನ ಮೌಲ್ಯಗಳ ಪ್ರತಿಬಿಂಬವಾಗಿವೆ. ಆಧುನಿಕತೆಯ ಅಬ್ಬರದಲ್ಲಿ ಮರೆಯಾಗುತ್ತಿರುವ ಜನಪದ ಕಲೆಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು. ಗ್ರಾಮೀಣ ಭಾಗದಲ್ಲಿ ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯುವುದರಿಂದ ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ದೊರೆಯುವುದರ ಜೊತೆಗೆ ಸಾಂಸ್ಕೃತಿಕ ಪರಂಪರೆ ಜೀವಂತವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಗುಂಡಪ್ಪ ಯಂಕಟ್ಟಿ ವಹಿಸಿ, ಜಾನಪದ ಕಲೆಗಳು ಸಮಾಜದ ಸಂಸ್ಕೃತಿ ಮತ್ತು ಜೀವನಶೈಲಿಯ ಜೀವನಾಡಿಯಾಗಿದ್ದು, ಇವುಗಳನ್ನು ಉಳಿಸಿ ಬೆಳೆಸುವ ಕಾರ್ಯದಲ್ಲಿ ಯುವಜನತೆ ಹೆಚ್ಚಿನ ಆಸಕ್ತಿ ವಹಿಸಬೇಕು ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ನಾಮದೇವ ಹುಲ್ಲೆ, ಬಾಬು ಮೇಕಾಲೆ, ಅಮೃತ ಹೊನ್ನಾಳೆ, ಕನ್ನಯ್ಯ ಯಂಕಟ್ಟಿ ಹಾಗೂ ಸೈಬಣ್ಣ ಖವಡೆ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಕಾರ್ಯಕ್ರಮಕ್ಕೆ ಶುಭ ಕೋರಿದರು. ಅವರು ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾಮಾಜಿಕ ಸಾಮರಸ್ಯವನ್ನು ಬಲಪಡಿಸುವುದರ



ಜೊತೆಗೆ ಜಾನಪದ ಕಲಾವಿದರಿಗೆ ಹೊಸ ಉತ್ಸಾಹ ತುಂಬುತ್ತವೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ತಾತೇರಾವ್ ಪಾಟೀಲ ಸ್ವಾಗತಿಸಿದರು. ಕಲಾವಿದ ಯಲ್ಲಾಲಿಂಗ ಪಾಟೀಲ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಜಾನಪದ ಗೀತೆಗಳು, ಸಾಂಪ್ರದಾಯಿಕ ಕಲಾ ಪ್ರದರ್ಶನಗಳು ಹಾಗೂ ಸ್ಥಳೀಯ ಕಲಾವಿದರ ಮನಮೋಹಕ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರೆದಿದ್ದ ಪ್ರೇಕ್ಷಕರ ಮನಗೆದ್ದವು. ಗ್ರಾಮಸ್ಥರು, ಕಲಾಭಿಮಾನಿಗಳು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ್ದ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಆಳಂದ ತಾಲೂಕು ಬರಗಾಲ ಘೋಷಿಸಿ: ಬಿಜೆಪಿ ಆಗ್ರಹ




**ಆಳಂದ :**ತಾಲೂಕನ್ನು ಬರಗಾಲ ಪೀಡಿತ ತಾಲೂಕು ಎಂದು ಘೋಷಿಸುವುದು, ರೈತರಿಗೆ ಏಕರೆಗೆ ?50,000 ಪರಿಹಾರ ಮಂಜೂರು ಮಾಡುವುದು ಹಾಗೂ ಬಾಕಿ ಉಳಿದಿರುವ ಬೆಳೆ ವಿಮೆ ಮೊತ್ತವನ್ನು ತಕ್ಷಣ ರೈತರ ಖಾತೆಗೆ ಜಮಾ ಮಾಡುವಂತೆ ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಸರ್ಕಾರಕ್ಕೆ ಒತ್ತಾಯಿಸಿದರು.

ಸೋಮವಾರ ಆಳಂದ ಪಟ್ಟಣದ ಬಸ್ ನಿಲ್ದಾಣದ ಎದುರು ಆಳಂದ ಮಂಡಲ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಆಳಂದ ತಾಲೂಕಿನಲ್ಲಿ ಈ ವರ್ಷ ಸಮರ್ಪಕ ಮಳೆಯಾಗದ ಪರಿಣಾಮ ಬರದ ಛಾಯೆ ಆವರಿಸಿದೆ. ರೈತರು ಬಿತ್ತನೆ ಮಾಡಿದ ಬೆಳೆಗಳು ಮಳೆಯ ಕೊರತೆಯಿಂದ ಒಣಗಿ ಅಪಾರ ನಷ್ಟ ಅನುಭವಿಸುತ್ತಿದ್ದಾರೆ. ಕೆರೆ-ಕಟ್ಟೆಗಳು, ಹಳ್ಳ-ಕೊಳ್ಳಗಳು ಹಾಗೂ ಜಲಮೂಲಗಳು ಬತ್ತುತ್ತಿದ್ದು, ಕುಡಿಯುವ ನೀರಿನ ಸಮಸ್ಯೆಯೂ ತೀವ್ರಗೊಂಡಿದೆ. ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು ಜೀವನ ನಿರ್ವಹಣೆಯೇ ದುಸ್ತರವಾಗಿದೆ ಎಂದರು.ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಆಳಂದ ತಾಲೂಕಿನ ಕೃಷಿ ಚಟುವಟಿಕೆ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಬಿತ್ತನೆಯಾದ ಬೆಳೆಗಳು ಜೀವಜಲಕ್ಕಾಗಿ ಕಾಯುವಂತಾಗಿದೆ. ಮಳೆ ಕೊರತೆಯಿಂದ ನಾಟಿ ಮಾಡಿದ ಹೊಲಗಳಲ್ಲಿ ಬೆಳೆ ನೆಲಕ್ಕಚ್ಚುವ ಸ್ಥಿತಿ ನಿರ್ಮಾಣವಾಗಿದ್ದು, ರೈತರಲ್ಲಿ ಆತಂಕ ಮನೆ ಮಾಡಿದೆ. ಅಲ್ಲದೆ ದಿನ ಕಳೆದಂತೆ ಅವರ ಬದುಕು ಮೂರಾಬಟ್ಟೆಯಾಗಿ ಆತಂಕದಲ್ಲಿದ್ದಾರೆ ಎಂದು ಹೇಳಿದರು.

ಜೂನ್ 1ರಿಂದ ಜುಲೈ 13ರವರೆಗೆ ತಾಲೂಕಿನಾದ್ಯಂತ ನಿರೀಕ್ಷಿತ 218 ಮೀ.ಮೀ. ಮಳೆಯ ಪೈಕಿ ಕೇವಲ 192 ಮಿ.ಮೀ. ಮಳೆಯಷ್ಟೇ ದಾಖಲಾಗಿದ್ದು, ಹಲವು ಹೋಬಳಿಗಳಲ್ಲಿ ಮಳೆ ಕೊರತೆ ಗಂಭೀರವಾಗಿದೆ. ಪರಿಣಾಮವಾಗಿ ಮುಂಗಾರು ಬಿತ್ತನೆ ನಿರೀಕ್ಷಿತ ಮಟ್ಟ ತಲುಪದೆ ಶೇ. 43ರಷ್ಟು ಮಾತ್ರ ಪೂರ್ಣಗೊಂಡಿದೆ.

ಕೃಷಿ ಇಲಾಖೆಯ ಅಂಕಿ-ಅಂಶಗಳ ಪ್ರಕಾರ, ಆಳಂದ ಹೋಬಳಿಯಲ್ಲಿ 149 ಮೀ.ಮೀ. ಮಳೆಯ ನಿರೀಕ್ಷೆಯಿದ್ದರೆ ಕೇವಲ 87 ಮೀ.ಮೀ. ಮಳೆಯಾಗಿ ಶೇ. 42ರಷ್ಟು ಕೊರತೆ ದಾಖಲಾಗಿದೆ. ಖಜೂರಿ ಹೋಬಳಿಯಲ್ಲಿ 150 ಮಿ.ಮೀ. ಪೈಕಿ 90 ಮಿ.ಮೀ. ಮಳೆಯಾಗಿ ಶೇ. 40ರಷ್ಟು ಕೊರತೆ ಕಂಡುಬಂದಿದೆ. ಮಾದನಹಿಪ್ಪರಗಾ ಹೋಬಳಿಯಲ್ಲಿ 145 ಮೀ.ಮೀ. ಪೈಕಿ 131 ಮೀ.ಮೀ. ಮಳೆಯಾಗಿ ಪರಿಸ್ಥಿತಿ ತುಸು ಸಮಾಧಾನಕರವಾಗಿದ್ದರೂ,ನರೋಣಾ ವಲಯದಲ್ಲಿ 154 ಮಿ.ಮೀ. ನಿರೀಕ್ಷಿತ ಮಳೆಯ ಪೈಕಿ ಕೇವಲ 25 ಮೀ.ಮೀ. ಮಳೆಯಾಗಿರುವುದು ರೈತರನ್ನು ತೀವ್ರ ಸಂಕಷ್ಟಕ್ಕೆ ತಳ್ಳಿದೆ. ನಿಂಬರಗಾ ಹೋಬಳಿಯಲ್ಲಿ 150 ಮಿ.ಮೀ. ಪೈಕಿ 66 ಮಿ.ಮೀ. ಮಳೆಯಷ್ಟೇ ದಾಖಲಾಗಿದೆ ಎಂದು ಮಾಹಿತಿ ನೀಡಿದರು.

ವೀರಣ್ಣಾ ಮಂಗಾಣೆ ಮಾತನಾಡಿ, ತಾಲೂಕಿನಲ್ಲಿ ಒಟ್ಟು 1,42,500 ಹೆಕ್ಟೇರ್ ಮುಂಗಾರು ಬಿತ್ತನೆ ಗುರಿ ಹೊಂದಲಾಗಿದ್ದು, ಇದುವರೆಗೆ ಸುಮಾರು 62 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು, ಇದು ಶೇ. 43ರಷ್ಟು ಪ್ರಗತಿಗೆ ಸಮವಾಗಿದೆ.

ಈಗಾಗಲೇ ಬಿತ್ತನೆಯಾಗಿರುವ ತೊಗರಿ, ಹೆಸರು, ಉದ್ದು, ಸೋಯಾಬೀನ್, ಹತ್ತಿ ಸೇರಿದಂತೆ ಮಳೆ ಆಶ್ರಿತ ಬೆಳೆಗಳಿಗೆ ತುರ್ತಾಗಿ ಉತ್ತಮ ಮಳೆಯ ಅಗತ್ಯವಿದೆ. ಇನ್ನೂ ಒಂದು ವಾರ ಮಳೆಯಾಗದಿದ್ದರೆ ಬೆಳೆಗಳು ಒಣಗಿ ರೈತರಿಗೆ ಭಾರೀ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂದು ಎಚ್ಚರಿದ್ದರು

ಬಸವರಾಜ ಬಿರಾದಾರ, ಈಗಾಗಲೇ ಕೆಲವರ ಬೆಳೆಗೆ ಮಳೆ ತೇವಾಂಶ ಕೊರತೆಯಾಗಿ ಬಿತ್ತನೆಯದ ಬೆಳೆ ಸಾಗುಮಾಡಿದ್ದಾರೆ. ಅಲ್ಲದೆ, ನೀರಾವರಿ ಸೌಲಭ್ಯ ಹೊಂದಿರುವ ರೈತರು ಬೋರ್‌ವೆಲ್ ಹಾಗೂ ಬಾವಿಗಳ ನೀರನ್ನು ಬಳಸಿ ಬೆಳೆ ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದು, ಮಳೆ ಆಶ್ರಿತ ಕೃಷಿಯನ್ನು ಅವಲಂಬಿಸಿರುವ ಬಹುತೇಕ ರೈತರು ಮಾತ್ರ ಆಕಾಶದತ್ತ ಚಿತ್ತ ಹರಿಸಿದ್ದಾರೆ ಎಂದು ದೂರಿದರು.

ಸಂಜಯ ಮಿಸ್ಕಿನ್ ಮಾತನಾಡಿ, ಆಳಂದ ತಾಲೂಕಿನಲ್ಲಿ ಮುಂಗಾರು ಕೈಕೊಟ್ಟಿರುವುದು ರೈತರಲ್ಲಿ ಆತಂಕ ಹೆಚ್ಚಿಸಿದ್ದು, ಮುಂದಿನ ಕೆಲವೇ ದಿನಗಳಲ್ಲಿ ಉತ್ತಮ ಮಳೆಯಾಗದಿದ್ದರೆ ಬೆಳೆ ಹಾನಿಯೊಂದಿಗೆ ಕೃಷಿ ಆರ್ಥಿಕತೆಯ ಮೇಲೂ ಗಂಭೀರ ಪರಿಣಾಮ ಬೀಳುವ ಸಾಧ್ಯತೆ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹಣಮಂತ ಕಾಬಡೆ ಮಾತನಾಡಿ, ನಮ್ಮ ಪ್ರಮುಖ ಬೇಡಿಕೆಗಳಾದ ಆಳಂದ ತಾಲೂಕನ್ನು ತಕ್ಷಣವೇ ಬರಗಾಲ ಪೀಡಿತ ತಾಲೂಕು ಎಂದು ಘೋಷಿಸಬೇಕು. ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಏಕರಿಗೆ ?50,000 ಪರಿಹಾರವನ್ನು ಮಂಜೂರು ಮಾಡಬೇಕು. ಬಾಕಿ ಉಳಿದಿರುವ ಬೆಳೆ ವಿಮೆ (ಅಡಿಂಠಿ ಖಟಿಣಡಿಚಿಟಭಿಜ) ಮೊತ್ತವನ್ನು ಯಾವುದೇ ವಿಳಂಬವಿಲ್ಲದೆ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ರೈತರಿಗೆ ಅಗತ್ಯ ಮೇವು, ಕುಡಿಯುವ  ನೀರು ಹಾಗೂ ಇತರೆ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. 5. ಕೃಷಿ ಸಾಲಗಳ ಮರುಪಾವತಿಗೆ ಕಾಲಾವಕಾಶ ನೀಡಿ, ಬಡ್ಡಿ ಮನ್ನಾ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ರೈತರ ಹಿತದೃಷ್ಟಿಯಿಂದ ಈ ಎಲ್ಲ ಬೇಡಿಕೆಗಳನ್ನು ಸರ್ಕಾರವು ತುರ್ತು ಆದ್ಯತೆಯ ಮೇರೆಗೆ ಈಡೇರಿಸಿ, ಸಂಕಷ್ಟದಲ್ಲಿರುವ ರೈತರಿಗೆ ನೆರವಾಗುವಂತೆ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ, ರೈತ ಮೋರ್ಚಾ ಅಧ್ಯಕ್ಷ ನಾಗರಾಜ ಶೇಗಜಿ, ಹಿರಿಯ ಮುಖಂಡರಾದ ಮಲ್ಲಣ್ಣಾ ನಾಗೂರೆ, ಅಣ್ಣಾರಾವ ಪಾಟೀಲ ಕವಲಗಾ, ಶಿವಪ್ಪ ವಾರಿಕ, ಮಹಾದೇವಪ್ಪ ಪಾಟೀಲ, ಚಂದ್ರಕಾಂತ ಭೂಸನೂರ, ಆನಂದರಾವ ಪಾಟೀಲ ಕೋರಹಳ್ಳಿ, ಮಲ್ಲಿನಾಥ ಪರೇಣಿ, ನಾಗರಾಜ ದೇನಕ, ಹಣಮಂತ ಕಾಬಡೆ, ಆದಿನಾಥ ಹೀರಾ ಮಹಾದೇವಪ್ಪ ವಾಡೆ, ಕಲ್ಯಾಣಿ ದಾನಾಗೊಳ, ಪ್ರಕಾಶ ಸಣಮನಿ, ಮಾಣಿಕ ರಾಠೋಡ, ಶಿವಪ್ಪ ಘಂಟೆ, ವೀರಭದ್ರ ಖೂನೆ, ಕುಮಾರ ಬಂಡೆ, ಪ್ರಕಾಶ ಮಾನೆ, ಸೀತಾರಾಮ ಜಮಾದಾರ, ವೈಜನಾಥ ಜಿಡಗೆ, ಗುರು ಲಾವಣಿ, ಸುವರ್ಣಾ ಪಾಟೀಲ, ಉದಯ ಪಾಟೀಲ, ಗಣೇಶ ಓಣಮಶೆಟ್ಟಿ, ಬಸವರಾಜ ಹತ್ತರಕಿ, ಸುನೀಲ ಹಿರೋಳಿಕರ ಸೇರಿದಂತೆ ಬಿಜೆಪಿಯ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

## ಜು.29ರಿಂದ ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಘಟನೆಗೆ ವೇಗ: ಎಐಸಿಸಿ ತಂಡ ಐದು ದಿನಗಳ ಪ್ರವಾಸ

**ಯಾದಗಿರಿ:** ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ನೇಮಕಾತಿ ಹಾಗೂ ಪಕ್ಷದ ಸಂಘಟನೆ ಬಲವರ್ಧನೆ ಉದ್ದೇಶದಿಂದ ಎಐಸಿಸಿ ಮತ್ತು ಕೆಪಿಸಿಸಿ ಪದಾಧಿಕಾರಿಗಳ ತಂಡ ಜು.29ರಿಂದ ಐದು ದಿನಗಳ ಕಾಲ ಯಾದಗಿರಿ ಜಿಲ್ಲೆಯ ವಿವಿಧ ಬ್ಲಾಕ್‌ಗಳಲ್ಲಿ ಸಭೆಗಳನ್ನು ನಡೆಸಲಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಅನಪುರ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಿರ್ದೇಶನದಂತೆ ದೇಶಾದ್ಯಂತ "ಸಂಘಟನೆ-ಸೃಜನ ಅಭಿಯಾನ" ನಡೆಯುತ್ತಿದ್ದು, ಅದರ ಭಾಗವಾಗಿ ಯಾದಗಿರಿ ಜಿಲ್ಲೆಯಲ್ಲೂ ಸಭೆಗಳ ಸರಣಿ ಆಯೋಜಿಸಲಾಗಿದೆ ಎಂದು ಹೇಳಿದರು.ಜು.29ರಂದು ಮಧ್ಯಾಹ್ನ 12.30ಕ್ಕೆ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಯಾದಗಿರಿ ಜಿಲ್ಲಾ ಉಸ್ತುವಾರಿಯಾಗಿರುವ ಎಐಸಿಸಿ ಕಾರ್ಯದರ್ಶಿ ಜಟ್ಟು ಕುಸನಕುಮಾರ ಅವರ ನೇತೃತ್ವದಲ್ಲಿ ಪಕ್ಷದ ವಿವಿಧ ಘಟಕಗಳ ಪ್ರಮುಖರ ಸಭೆ ನಡೆಯಲಿದೆ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದ್ದು, ಅವುಗಳನ್ನು ಕೆಪಿಸಿಸಿ ಮೂಲಕ ಎಐಸಿಸಿಗೆ ಕಳುಹಿಸಲಾಗುತ್ತದೆ. ಅಂತಿಮವಾಗಿ ಎಐಸಿಸಿ ಮಟ್ಟದಲ್ಲಿ ಹೊಸ ಜಿಲ್ಲಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ವಿವರಿಸಿದರು.

ಸಭೆಗಳ ವೇಳಾಪಟ್ಟಿಯಂತೆ ಜು.30ರಂದು ಬೆಳಗ್ಗೆ 11ಕ್ಕೆ ಸುರಪುರ ಹಾಗೂ ಮಧ್ಯಾಹ್ನ 2ಕ್ಕೆ ಹುಣಸಗಿ, ಜು.31ರಂದು ಶಹಾಪುರ ಮತ್ತು ಕೆಂಭಾವಿ, ಆ.1ರಂದು ಯಾದಗಿರಿ



ಹಾಗೂ ವಡಗೇರಾ, ಆ.2ರಂದು ಗುರುಮಠಕಲ್ ಮತ್ತು ಸೈದಾಪುರದಲ್ಲಿ ಬ್ಲಾಕ್ ಕಾಂಗ್ರೆಸ್ ಪ್ರಮುಖರ ಸಭೆಗಳು ನಡೆಯಲಿವೆ ಎಂದು ತಿಳಿಸಿದರು.ಐದು ದಿನಗಳ ಪ್ರವಾಸದ ಅವಧಿಯಲ್ಲಿ ಎಐಸಿಸಿ ಕಾರ್ಯದರ್ಶಿ ಜಟ್ಟು ಕುಸನಕುಮಾರ ಹಾಗೂ ಕೆಪಿಸಿಸಿ ಪದಾಧಿಕಾರಿಗಳಾದ ರಾಜಗೋಪಾಲರೆಡ್ಡಿ, ಶರಣಗೌಡ ಭಯ್ಯಾಪುರ ಮತ್ತು ಮಂಜುಳಾ ಜಿಲ್ಲೆಯಲ್ಲೇ ತಂಗಿ ಸಂಘಟನೆ ಬಲವರ್ಧನೆ ಕಾರ್ಯಕ್ಕೆ ನೇತೃತ್ವ ವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ವಕ್ತಾರ ಶ್ಯಾಮಸನ್ ಮಾಳಿಕೇರಿ, ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷ ಹೊನ್ನೇಶ ದೊಡ್ಡಮನಿ, ಕಾಂಗ್ರೆಸ್ ಮುಖಂಡ ತಿಮ್ಮಣ್ಣ ನಾಯಕ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಯತೀಂ ಖಾನಾ, ವಕ್ಫ್ ಶಾಖಾ ಸಂಸ್ಥೆಗಳಿಗೆ ಭೇಟಿ ನೀಡಿದ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಹಜರತ್ ಡಾ. ಮೊಹಮ್ಮದ ಅಲಿ ಅಲ್ ಹುಸೈನಿ



**ಕಲಬುರಗಿ, ಜು.26–** ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸೈನಿ ಅವರು, ಕಲಬುರಗಿ ನಗರದ ಯತೀಂ ಖಾನಾ, ಅಂಜುಮನ್ ಅನ್ಸಾರುಸ್–ಸುಫ್ಫಾಗೆ ಭೇಟಿ ನೀಡಿ, ವಕ್ಫ್ ಸಂಸ್ಥೆಯ ಆಡಳಿತ, ಕಾರ್ಯನಿರ್ವಹಣೆ ಹಾಗೂ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿಯನ್ನು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಾ. ಅಲ್ ಹುಸೈನಿ ಅವರು ಯತೀಂ ಖಾನಾದ ಎಸಿಎಫ್ ಆಡಳಿ ವಿಭಾಗದ ಮೊಹಮ್ಮದ್ ಮುಜೀಬುದ್ದೀನ್ ಹಾಗೂ ಕಲಬುರಗಿ ವಕ್ಫ್ ಅಧಿಕಾರಿ ಪರ್ವೇಜ್ ಆಲಂ ಅವರೊಂದಿಗೆ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಸಂಸ್ಥೆಯ ದೈನಂದಿನ ಆಡಳಿತ, ವಕ್ಫ್ ಆಸ್ತಿಗಳ ನಿರ್ವಹಣೆ, ಶೈಕ್ಷಣಿಕ ಮತ್ತು ಕಲ್ಯಾಣ ಕಾರ್ಯಕ್ರಮಗಳು ಹಾಗೂ ಮಕ್ಕಳಿಗೆ ನೀಡಲಾಗುತ್ತಿರುವ ಸೇವೆಗಳ ಗುಣಮಟ್ಟವನ್ನು ಇನ್ನಷ್ಟು ಉತ್ತಮಗೊಳಿಸುವ ಕುರಿತು ಸವಿಸ್ತಾರವಾಗಿ ಚರ್ಚಿಸಲಾಯಿತು.

ಭೇಟಿಯ ಭಾಗವಾಗಿ ಅಧ್ಯಕ್ಷರು, ವಿದ್ಯಾರ್ಥಿಗಳು ಮತ್ತು ಆಡಳಿತಾಧಿಕಾರಿಗಳು, ಸಿಬ್ಬಂದಿಯೊಂದಿಗೆ ಸಂವಾದ ನಡೆಸಿ, ಅವರ ಅಗತ್ಯತೆಗಳು ಹಾಗೂ ಕುಂದುಕೊರತೆಗಳನ್ನು ಆಲಿಸಿದರು. ಸಂಸ್ಥೆಯ ಕಾರ್ಯನಿರ್ವಹಣೆ ಕುರಿತು ಅಭಿಪ್ರಾಯಗಳನ್ನು ಸಂಗ್ರಹಿಸಿದರು. ಬಳಿಕ ಅವರು ಯತೀಂ ಖಾನಾದ ಆವರಣವನ್ನು ಪರಿಶೀಲಿಸಿ, ವಸತಿ, ಶಿಕ್ಷಣ, ಊಟದ ವ್ಯವಸ್ಥೆ ಹಾಗೂ ನಿವಾಸಿ ಮಕ್ಕಳಿಗೆ ಒದಗಿಸಲಾಗುತ್ತಿರುವ ಇತರೆ ಮೂಲಭೂತ ಸೌಲಭ್ಯಗಳನ್ನು ವೀಕ್ಷಿಸಿದರು.

ಡಾ. ಅಲ್ ಹುಸೈನಿ ಅವರು ಮಕ್ಕಳ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದರು. ವಕ್ಫ್ ಸಂಸ್ಥೆಗಳ ಆಡಳಿತದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಮಕ್ಕಳಿಗೆ ಉತ್ತಮ ಆರೈಕೆಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಅವರು ಒತ್ತಿ ಹೇಳಿದರು.

ಅಲ್ಲದೆ, ಅನಾಥ ಹಾಗೂ ಹಿಂದುಳಿದ ಮಕ್ಕಳಿಗೆ ಉತ್ತಮ ಶೈಕ್ಷಣಿಕ ಅವಕಾಶಗಳು ಮತ್ತು ಸಮಗ್ರ ಕಲ್ಯಾಣ ಒದಗಿಸುವ ಉದ್ದೇಶದ ಎಲ್ಲಾ ಯೋಜನೆಗಳಿಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮುಂದೆಯೂ ತನ್ನ ಸಂಪೂರ್ಣ ಬೆಂಬಲವನ್ನು ನೀಡಲಿದೆ ಎಂದು ಅವರು ಭರವಸೆ ನೀಡಿದರು

# ಹಳೆ ವೈಷಮ್ಯ:ಮಾರಕಾಸ್ತ್ರಗಳಿಂದ ಹೊಡೆದು ವ್ಯಕ್ತಿ ಕೊಲೆ



**ಕಲಬುರಗಿ,ಜು.28–**ಹಳೆ ವೈಷಮ್ಯದಿಂದ ವ್ಯಕ್ತಿಯೊಬ್ಬನನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿರುವ ಘಟನೆ ಸೇಡಂ ರಸ್ತೆಯ ವೈನ್‌ಶಾಪ್ ಹತ್ತಿರ ಭಾನುವಾರ ರಾತ್ರಿ ನಡೆದಿದೆ.ಆದರ್ಶ ನಗರದ ರವಿಚಂದ್ರ ಗುತ್ತೇದಾರ (47) ಕೊಲೆಯಾದವರು.ಹುಮನಾಬಾದ ರಿಂಗ್ ರಸ್ತೆಯಲ್ಲಿರುವ ಫೈನಾನ್ಸ್ ಹತ್ತಿರ ಟೀಪಾಯಿಂಟ್ ಇಟ್ಟುಕೊಂಡು ಜೀವನ ನಡೆಸುತ್ತಿದ್ದ ರವಿಚಂದ್ರ ಗುತ್ತೇದಾರ ಎಂದಿನಂತೆ ಸೇಡಂ ರಸ್ತೆಯಲ್ಲಿರುವ ವೈನ್‌ಶಾಪ್‌ಗೆ ಮದ್ಯ ಸೇವಿಸಲು ಹೋದ ವೇಳೆ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಈ ಹಿಂದೆ ರೋಜಾ ಏರಿಯಾದಲ್ಲಿ ಕುಟುಂಬದೊಂದಿಗೆ ರವಿಚಂದ್ರ ಗುತ್ತೇದಾರ ವಾಸವಾಗಿದ್ದ. 2020ರಲ್ಲಿ ನಡೆದ ಅಬ್ದುಲ್ ಇನ್ಸಾದ್ ಕೊಲೆ ಪ್ರಕರಣದಲ್ಲಿ ಈತನ ವಿರುದ್ಧ ಪ್ರಕರಣ ದಾಖಲಾಗಿತ್ತು. ಅಬ್ದುಲ್ ಇನ್ಸಾದ್ ಕಡೆಯವರು ಆಗಾಗ ಹೆದರಿಸುತ್ತಿದ್ದುದ್ದರಿಂದ ಅಲ್ಲಿನ ಮನೆ ಮಾರಿ ಆದರ್ಶನಗರದಲ್ಲಿ ಹೊಸ ಮನೆ ಖರೀದಿಸಿದ್ದ. ಅಲ್ಲದೆ ಹುಮನಾಬಾದ ರಿಂಗ್ ರಸ್ತೆಯಲ್ಲಿರುವ ಫೈನಾನ್ಸ್ ಹತ್ತಿರ ಟೀಪಾಯಿಂಟ್ ಇಟ್ಟುಕೊಂಡು ಜೀವನ ನಡೆಸುತ್ತಿದ್ದ. ಭಾನುವಾರ ಸೇಡಂ ರಸ್ತೆಯಲ್ಲಿರುವ ವೈನ್‌ಶಾಪ್‌ಗೆ ಮದ್ಯ ಸೇವಿಸಲು ಹೋದ ವೇಳೆ ಹಳೆ ವೈಷಮ್ಯದಿಂದ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಈ ಸಂಬಂಧ ಕೊಲೆಯಾದ ರವಿಚಂದ್ರ ಅವರ ಪತ್ನಿ ಜಯಶ್ರೀ ಗುತ್ತೇದಾರ ಅವರು ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ರೈತ ಆತ್ಮಹತ್ಯೆ

**ಅಫಜಲಪುರ** :ತಾಲೂಕಿನ ಹಿಂಚಗೇರಾ ಗ್ರಾಮದ ಯುವ ರೈತ ಅಂಬರೀಶ್ ಶಿವಪೂರ (21) ಅವರು ಜಮೀನಿನಲ್ಲಿ ಕೀಟನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುವ ದುರ್ಘಟನೆ ಜುಲೈ 25ರ ರಾತ್ರಿ ನಡೆದಿದೆ.

ಕುಟುಂಬದ ಮೇಲೆ ಕೆನರಾ ಬ್ಯಾಂಕ್‌ನ ಸುಮಾರು 6 ಲಕ್ಷ ಸಾಲ ಹಾಗೂ ಖಾಸಗಿಯಾಗಿ ಸುಮಾರು 10 ಲಕ್ಷ ಸಾಲ ಇತ್ತು.ಸಾಲ ನೀಡಿದವರು ಆಗಾಗ ಹಣಕ್ಕಾಗಿ ಮನೆಗೆ ಬರುತ್ತಿದ್ದರಿಂದ ಕುಟುಂಬ ತೀವ್ರ ಮಾನಸಿಕ ಒತ್ತಡದಲ್ಲಿತ್ತು ಎನ್ನಲಾಗಿದೆ.ಕಳೆದ ವರ್ಷ ಅತಿವೃಷ್ಟಿಯಿಂದ ಬೆಳೆ ಸಂಪೂರ್ಣ ಹಾನಿಗೊಳಗಾಗಿತ್ತು.ಈ ವರ್ಷ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು,ನಿರಂತರ ಬೆಳೆ ನಷ್ಟದಿಂದ ಕುಟುಂಬ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿತ್ತು.ತಂದೆಯ ಮೇಲಿನ ಸಾಲದ ಒತ್ತಡ ಹಾಗೂ ಕುಟುಂಬದ ಪರಿಸ್ಥಿತಿಯಿಂದ ಮನನೊಂದ ಅಂಬರೀಶ್ ಅವರು ತಮ್ಮ ಜಮೀನಿನಲ್ಲಿ ಕೀಟನಾಶಕ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು.ತಕ್ಷಣವೇ ಕುಟುಂಬಸ್ಥರು ಅವರನ್ನು ಅಫಜಲಪುರ ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದರು.ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟರು.ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಅಫಜಲಪುರ ಪೊಲೀಸರು ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಮರಣೋತ್ತರ ಪರೀಕ್ಷೆ ಬಳಿಕ ಮೃತದೇಹವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.ಈ ಸಂಬಂಧ ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೀದರ ಮ್ಯಾರಥಾನ್ ಲೋಗೋ ಬಿಡುಗಡೆಗೊಳಿಸಿದ ಡಾ. ರೇಷ್ಮಾ ಕೌರ್

**ಬೀದರ:** ಮೈಲೂರ ರಸ್ತೆಯಲ್ಲಿರುವ ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜ್‌ನ ಗುರು ಭವನದಲ್ಲಿ ಸೋಮವಾರ 27–7–2026 ರಂದು ಬೀದರ ಮ್ಯಾರಥಾನ್ ಲೋಗೋ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ನವೆಂಬರ್ 15, 2026 ರವಿವಾರದಂದು ಬೀದರ ಮ್ಯಾರಥಾನ್ 2.0, ಶಾಂತಿಗಾಗಿ ಓಡಿ, ಮಾನವತೆಗಾಗಿ ಓಡಿ ಎಂಬ ಧ್ಯಯದೊಂದಿಗಿದೆ ಗುರು ನಾನಕ ಶಿಕ್ಷಣ ಸಂಸ್ಥೆಯಿಂದ ಮ್ಯಾರಥಾನ್ ಹಮ್ಮಿಕೊಳ್ಳಾಗಿದೆ.

ಮ್ಯಾರಥಾನ್ ನಾಲ್ಕು ಪ್ರಕಾರವಾಗಿ ವಿಂಡಗಣೆ ಮಾಡಲಾಗಿದೆ. 3 ಕಿ.ಮೀ, 5 ಕಿ.ಮೀ, 10 ಕಿ.ಮೀ ಮತ್ತು 21 ಕಿ.ಮೀ ಮ್ಯಾರಥಾನ್ ಹಮ್ಮಿಕೊಳ್ಳಲಾಗಿದೆ ಎಂದು ಗುರುನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ತಿಳಿಸಿದರು.

ಮ್ಯಾರಥಾನ್ ಮೂಲಕ ಬೀದರ ಜಿಲ್ಲೆಯನ್ನು ಒಂದು ಅತ್ಯುತ್ತಮ ಪ್ರವಾಸಿ ತಾಣವನ್ನಾಗಿ ಬೆಳೆಯಲು ಸಹಕಾರಿಯಾಗುತ್ತದೆ. ರಾಷ್ಟ್ರಮಟ್ಟದ ಕ್ರೀಡಾಪಟುಗಳು ಜಿಲ್ಲೆಗೆ ಆಗಮಿಸುವುದರಿಂದ ಇಲ್ಲಿರುವ ಮಠ, ಮಸೀದಿ, ಮಂದಿರ, ಗುರುದ್ವಾರ ಮತ್ತು ಧಾರ್ಮಿಕ ಸ್ಥಳಗಳ ವೀಕ್ಷಣೆ ಮಾಡುತ್ತಾರೆ, ಪ್ರತೀ ವರ್ಷ ಮ್ಯಾರಥಾನ್ ಹಮ್ಮಿಕೊಳ್ಳುವ ಗುರಿ ಹೊಂದಲಾಗಿದೆ ಎಂದರು.

ಗುರುನಾನಕ ಶಾಲೆಯಲ್ಲಿ ಅಧ್ಯಯನ ಮಾಡಿದ ಸಾವಿರಾರು ವಿದ್ಯಾರ್ಥಿಗಳು ವೈದ್ಯಕೀಯ, ಅಭಿಯಂತರರು, ಶಿಕ್ಷಕರು ಸೇರಿದಂತೆ ಹಲವಾರು ವೃತ್ತಿಗಳಲ್ಲಿ ಹೆಸರು ಪಡೆದುಕೊಂಡಿದ್ದಾರೆ. ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ತಮ್ಮದೇ ಆದ ಸೇವೆ ಸಲ್ಲಿಸುತ್ತಿರುವುದು ನಮ್ಮ ಶಾಲೆಯ ಹಿರಿಮೆ ಗರಿಮೆಗೆ ಸಾಕ್ಷಿಯಾಗಿದೆ. ಕೇವಲ




ಶಿಕ್ಷಣ ಮಾತ್ರವಲ್ಲ ಅದರ ಜೊತೆಜೊತೆಗೆ ಉತ್ತಮ ಸಂಸ್ಕಾರ ನೀಡಲಾಗುತ್ತಿದೆ ಎಂದು ಡಾ. ರೇಷ್ಮಾ ಕೌರ್ ತಿಳಿಸಿದರು.

ಈ ಸಂದರ್ಭದಲ್ಲಿ ಪುನಿತ್ ಸಿಂಗ್, ಪವೀತ್ ಸಿಂಗ್, ಗುರು ನಾನಕ ಆಸ್ಪತ್ರೆಯ ಇ.ಎನ್.ಟಿ. ಡಾ. ನಿಶಾ ಕೌರ್, ಡಾ. ಜಸ್ಮಿನೀತ್ ಕೌರ್, ಜಠರ–ಕರುಳು ರೋಗ ತಜ್ಞ ಡಾ. ಸಂತೋಷ ಕುಮಾರ, ಸ್ತ್ರೀರೋಗ, ಐವಿಎಫ್ ತಜ್ಞ ಡಾ. ಸಂದೀಪ ಗಾಯಕವಾಡ, ಜನರಲ್ ಮೇಡಿಸಿನ್ ತಜ್ಞ ಡಾ. ನವ್ಯಶ್ರೀ ಮತ್ತು ಅರ್ಥೋಪೆಡಿಕ್ ತಜ್ಞ ವೀರೇಶ್ ಗೋರಶೆಟ್ಟಿ, ಗುರು ನಾನಕ ಆಸ್ಪತ್ರೆಯ ಸಿ.ಇ.ಓ. ಕಾಮೇಶ್ವರ ರಾವ, ಕರ್ನಲ್ ಆರ್.ಡಿ.ಸಿಂಗ್ ಮತ್ತು ಸಂಸ್ಥೆಯ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಅಂತರಾತ್ಮದ ಮೌನ ಪರಮಾತ್ಮನನ್ನು ಸೇರಿಸುತ್ತದೆ : ಹಾರಕೂಡ ಶ್ರೀ

**ಬಸವಕಲ್ಯಾಣ:** ಮೌನವೆಂದರೆ ಶಬ್ದದ ಕೊರತೆ ಅಲ್ಲ, ಅದೊಂದು ವಿವೇಚನೆಯ ಗರಿಷ್ಠ ಹಂತ, ಹಾಗಾಗಿ ಯಾರು ಅಂತರಾತ್ಮದ ಮೌನ ಅನುಸರಿಸುವರೊ ಅಂಥಹವರು ಪರಮಾತ್ಮನ ಕಕ್ಷೆಯಲ್ಲಿ ಪ್ರವೇಶ ಪಡೆಯುತ್ತಾರೆ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಧರ್ಮ ಸಭೆಯ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಸಂಸಾರದಲ್ಲಿ ಬರುವ ಅನೇಕ ಅವಘಢಗಳನ್ನು ತಪ್ಪಿಸಲು ಮೌನವನ್ನು ಒಂದು ಪ್ರಬಲ ಅಸ್ತ್ರವಾಗಿ ಬಳಸಿಕೊಳ್ಳಬಹುದಾಗಿದೆ.

ಒಂದು ಕ್ಷಣದ ಮೌನದಿಂದ ವರ್ಷಗಟ್ಟಲೆ ಪಡುವ ಪಶ್ಚತ್ತಾಪವನ್ನು ಖಂಡಿತ ತಪ್ಪಿಸಬಹುದು, ವ್ಯಕ್ತಿ, ಸಮಯ, ಸಂದರ್ಭಗಳಿಗೆ ಅನುಗುಣವಾಗಿ ಮೌನಕ್ಕೆ ಜಾರುವ ಕಲೆ ತಿಳಿದವ ನೆಮ್ಮದಿಯಿಂದ ಬದುಕಬಲ್ಲ ಎಂದು ಹೇಳಿದ ಪೂಜ್ಯರು ಸಮಸ್ತ ಭಕ್ತ ಸಂಕುಲ ಶ್ರೇಯಸ್ಸಿನಿಂದ ಬದುಕುವಂತಾಗಲಿ ಎಂದು ಶುಭ ಹಾರೈಸಿದರು.

ಬಸವರಾಜ ಪೊಲೀಸ್ ಪಾಟೀಲ, ರಾಜಕುಮಾರ ಯಾಚೆ, ಜಯಪ್ರಕಾಶ ಬಿರಾದಾರ, ಮಹಾಂತಪ್ಪ ಶ್ರೀಚಂದ, ಸುಧಾಕಾರ ಪಾಟೀಲ, ಜಗನ್ನಾಥ ಕಾರಭಾರಿ, ಗೋವಿಂದ ರೆಡ್ಡಿ, ಶ್ರೀರಂಗ ಜಮಾದಾರ ಉಪಸ್ಥಿತರಿದ್ದರು.

ಧನರಾಜ ಕ್ಷೀರಸಾಗರ ಸ್ವಾಗತಿಸಿದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಹಾಗೂ ಶರಣಪ್ಪ ಜಮಾದಾರ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಧನರಾಜ ಕ್ಷೀರಸಾಗರ ಸಿರಗಾಪೂರ ಪರಿವಾರದ ವತಿಯಿಂದ ಹಾರಕೂಡ ಶ್ರೀಗಳ 1020ನೇ ತುಲಾಭಾರ ಜರುಗಿತು.



ಚಿತ್ರ : ಬಸವಕಲ್ಯಾಣ ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಧರ್ಮ ಸಭೆಯನ್ನು ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು.

ಬಸವರಾಜ ಪೊಲೀಸ್ ಪಾಟೀಲ, ರಾಜಕುಮಾರ ಯಾಚೆ, ಜಯಪ್ರಕಾಶ ಬಿರಾದಾರ, ಮಹಾಂತಪ್ಪ ಶ್ರೀಚಂದ, ಧನರಾಜ ಕ್ಷೀರಸಾಗರ ಅಂಬರಾಯ ಪೂಜಾರಿ, ಭಾಗಣ್ಣ ಪೂಜಾರಿ ಉಪಸ್ಥಿತರಿದ್ದರು.

# ವಿಶ್ವವಿದ್ಯಾಲಯಗಳು ಮಾನವೀಯ ಮೌಲ್ಯಗಳ ಪರಂಪರೆಯ ತಾಣಗಳು



**ಬಳ್ಳಾರಿ, ಜು.28:** ಕೃತಕ ಬುದ್ಧಿಮತ್ತೆ ಅಥವಾ ಇನ್ಯಾವುದೇ ತಂತ್ರಜ್ಞಾನಗಳು ವಿದ್ಯಾರ್ಥಿಗಳಲ್ಲಿ ಪ್ರಾಮಾಣಿಕತೆ, ನೈತಿಕತೆ ಮತ್ತು ಸಹಾನುಭೂತಿಯ ಶಿಕ್ಷಣ ಒದಗಿಸುದಿಲ್ಲ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ಧಲಿಂಗ ಪ್ರಭು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ 17ನೇ ಸಂಸ್ಥಾಪನಾ ದಿನಾಚರಣೆಯನ್ನು ಗಣ್ಯರೊಂದಿಗೆ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ನೀಡುವುದರ ಜೊತೆಗೆ ಮಾನವಿಯ ಮೌಲ್ಯಗಳ ಪರಂಪರೆಯ ಕುರಿತಾದ ಜ್ಞಾನ ಒದಗಿಸಬೇಕು. ವಿದ್ಯಾರ್ಥಿಗಳ ಸಾಮಾಜಿಕ ಪರಂಪರೆಯನ್ನು ಉಳಿಸಿ, ಬೆಳೆಸಬೇಕಾಗಿದೆ. ವಿದ್ಯಾರ್ಥಿಗಳು ಸದಾಕಾಲ ಕಲಿಕಾ ಆಸಕ್ತಿಯನ್ನು ಹೊಂದಿರಬೇಕು ಎಂದು ತಿಳಿಸಿದರು. ಯುವಕರಲ್ಲಿ ಮಾನವೀಯ ಮೌಲ್ಯಗಳ ಕೊರತೆಯಿಂದಾಗಿ ಜಿಲ್ಲೆಯಲ್ಲಿ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿವೆ. ವಿಶ್ವವಿದ್ಯಾಲಯಗಳು ಮೌಲ್ಯಯುತ ಶಿಕ್ಷಣ ಒದಗಿಸಲು ಶ್ರಮಿಸಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗುಲಬರ್ಗಾ ವಿವಿಯ ವಿಶ್ರಾಂತ ಕುಲಪತಿಗಳಾದ ಪ್ರೊ ಎಂ ಮುನಿಯಮ್ಮ ಮಾತನಾಡಿ, ಸಂಶೋಧನಾ ವಿದ್ಯಾರ್ಥಿಗಳು ಯಾವುದೆ ಫೆಲೊಶೀಪ್‌ಗಾಗಿ ಕಾಯದೆ ಸಂಶೋಧನಾ ಲೇಖನಗಳನ್ನು ಅಂತರಾಷ್ಟೀಯ ಮಟ್ಟದ ಜರ್ನಲ್‌ಗಳಲ್ಲಿ ಪ್ರಕಟಿಸಲು ಒತ್ತು ನೀಡಿ. ಯಶಸ್ಸಿಗೆ ಸುಲಭ ಮಾರ್ಗ ಹುಡುಕದೆ ಶ್ರಮವಹಿಸಿ ಉತ್ತಮ ಸಂಶೋಧನೆಯಲ್ಲಿ ತೊಡಗಿಕೊಳ್ಳಿ ಎಂದು ಕಿವಿಮಾತು ಹೇಳಿದರು. ಬೋಧಕರು ಸಹ ಪಾಠ ಮಾಡುವ ಮೊದಲು ಉತ್ತಮವಾಗಿ ತಯಾರಿ ನಡೆಸಬೇಕು ಎಂದು ಹೇಳಿದರು.

ಬೆಂಗಳೂರು ವಿವಿಯ ಮಾಜಿ ಕುಲಸಚಿವರಾದ ಪ್ರೊ ಕೆ ಸೀತಮ್ಮ ಅತಿಥಿಗಳಾಗಿ ಮಾತನಾಡಿ, ಸಮಾಜದಲ್ಲಿ ಸಮಾನತೆ ಶಿಕ್ಷಣ ಕ್ಷೇತ್ರವು ದೇಶದ ಆರ್ಥಿಕ ಪ್ರಗತಿಗಿಂತ ಶೇ 13.8 ಏರಿಕೆ ಕಂಡಿದೆ. ಉನ್ನತ ಶಿಕ್ಷಣದಲ್ಲಿ ಮಹಿಳಾ ಶಿಕ್ಷಣವು ಶೇ 27.9 ಪ್ರಗತಿ ಕಂಡಿದೆ. ಇಷ್ಟಾದರೂ ವಿಶ್ವದ ಒಟ್ಟು ಶಿಕ್ಷಿತರ 30 ಪ್ರತಿಶತ ಭಾಗದಷ್ಟು ನಮ್ಮ ದೇಶ ತಲುಪಿಲ್ಲ. 1289 ವಿಶ್ವವಿದ್ಯಾಲಯಗಳು 48 ಸಾವಿರಕ್ಕೂ ಹೆಚ್ಚು ಕಾಲೇಜುಗಳಲ್ಲಿ 4 ಕೋಟಿಗೂ ಅಧಿಕ ವಿದ್ಯಾರ್ಥಿಗಳಿಗೆ 17.3 ಲಕ್ಷ ಶಿಕ್ಷಕರಿದ್ದರೂ ಸಹ ನಿಗದಿತ ಶೈಕ್ಷಣಿಕ ಸಾಧನೆ ಆಗಿಲ್ಲ. ಕೇವಲ ಶಿಕ್ಷಣದಿಂದ ಮಾತ್ರವೇ ಸಾಮಾಜಿಕ ಹಾಗೂ ಸಾರ್ವಜನಿಕ ಸಮಾನತೆ ಮತ್ತು ಅಭಿವೃದ್ಧಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ. ಮುನಿರಾಜು ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಸುಲಭ ಮಾರ್ಗವಿಲ್ಲ. ಕಷ್ಟಪಟ್ಟು ಓದಿದಾಗ ಒಳ್ಳೆಯ ಗೌರವ ಸಿಗುತ್ತದೆ. ಸರ್ಕಾರದಿಂದ ಬರಲಿರುವ ಅನುದಾನವನ್ನು ವಿವಿಯ ಅಭಿವೃದ್ದಿಗಾಗಿ ಬಳಸಲಾಗುವುದು ಎಂದು ಹೇಳಿದರು.

17ನೇ ಸಂಸ್ಥಾಪನೆ ದಿನಾಚರಣೆಯ ಅಂಗವಾಗಿ ವಿವಿಯ ಆವರಣದಲ್ಲಿ 100 ಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ನೆಡುತೋಪು ಕಾರ್ಯಕ್ರಮ ನೆಡಲಾಯಿತು. ಎಂಸಿಎ ಎಂಕಾಂ ಎಂಬಿಎ ವಿದ್ಯಾರ್ಥಿಗಳಿಗಾಗಿ ಕಂಪ್ಯೂಟರ್ ಪ್ರಯೋಗಾಲಯಗಳನ್ನು ಉದ್ಘಾಟಿಸಲಾಯಿತು. ವಿವಿಯ ನವಿಕೃತ ವೆಬ್‌ಸೈಟ್‌ಗೆ ಚಾಲನೆ ನೀಡಲಾಯಿತು. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಶಿಷ್ಯವೇತನದ ಚೆಕ್‌ಗಳನ್ನು ನೀಡಲಾಯಿತು. ಅಂಧ ವಿದ್ಯಾರ್ಥಿಗೆ ಲ್ಯಾಪ್ಟಾಪ್ ನೀಡಲಾಯಿತು. ಹಾಗೂ ವಿಶ್ವದ 5% ವಿಜ್ಞಾನಿಗಳ ಸಾಲಿನಲ್ಲಿ ಸ್ಥಾನ ಪಡೆದಿರುವ ವಿಶ್ವವಿದ್ಯಾಲಯದ ಮೂವರು ಪ್ರಾಧ್ಯಾಪಕರುಗಳಿಗೆ ಸನ್ಮಾನಿಸಲಾಯಿತು ಮಾಡಲಾಯಿತು.ವಿಶ್ವವಿದ್ಯಾಲಯದ ವಿತ್ತಾಧಿಕಾರಿಗಳಾದ ಸ್ಫೂರ್ತಿ ಕೆ ಜಿ, ಸಂಸ್ಥಾಪನಾ ದಿನಾಚರಣೆಯ ಸಂಯೋಜಕರಾದ ಪ್ರೊ ಕೆ ಎಸ್ ಲೋಕೇಶ್ ವೇದಿಕೆಯಲ್ಲಿದ್ದರು.

ಈ ಸಂದರ್ಭದಲ್ಲಿ ವಿವಿಯ ಎಲ್ಲ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರುಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಡಾ ಸುಷ್ಮಾ ಎನ್ ಜೋಗನ್ ನಿರೂಪಿಸಿದರು. ವಿವಿಯ ಕುಲಸಚಿವರಾದ ಪ್ರೊ ವಿ ಲೋಕೇಶ್ ಅತಿಥಿಗಳನ್ನು ಸ್ವಾಗತಿಸಿದರು. ಮೌಲ್ಯಮಾಪನ ಕುಲಸಚಿವರಾದ ಪ್ರೊ ಎನ್ ಎಂ ಸಾಲಿ ವಂದಿಸಿದರು. ನಂತರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ವಿಶ್ವವಿದ್ಯಾಲಯದ ಎಲ್ಲ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಬೋಧಕ–ಬೋಧಕೇತರ ವರ್ಗ, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಇದ್ದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**